# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 70 | FRIDAY 22-05-2026 | PRGI No : KNKAN/26/A0962 | Pages:4 | Rs.2.00 | M: 9742418836


## Cockroach Janta Party ಅಬ್ಬರ: ಬೆಂಗಳೂರಿನಲ್ಲಿ ಕಾಂಗ್ರೆಸ್ ನಾಯಕರಿಂದ ಐ ಆಮ್ ಕಾಕ್ರೋಚ್ ಟೀ ಶರ್ಟ್ ಬಿಡುಗಡೆ



ಬೆಂಗಳೂರು: ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರ ಹೇಳಿಕೆಗೆ ವಿರೋಧವಾಗಿ ಆರಂಭವಾದ ಕಾಕ್ರೋಚ್ ಜನತಾ ಪಾರ್ಟಿ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಸದ್ದು ಮಾಡುತ್ತಿದ್ದು, ಇನ್ಸ್ಟಾಗ್ರಾಮ್ ನಲ್ಲಿ ಕೇಂದ್ರದ ಆಡಳಿತರೂಢ ಬಿಜೆಪಿಯನ್ನೇ ಹಿಂದಿಕ್ಕಿದೆ.

ಕಾಕ್ರೋಚ್ ಜನತಾ ಪಕ್ಷ(CJP) ಭಾರತದ ರಾಜಕೀಯ ವಲಯ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಸಂಚಲನ ಸೃಷ್ಟಿಸಿದ್ದು, ಇತ್ತ ಬೆಂಗಳೂರಿನ ಫ್ರೀಡಂಪಾರ್ಕ್ ನಲ್ಲಿ ನಡೆದ ಯುವ ಕಾಂಗ್ರೆಸ್ ಪ್ರತಿಭಟನೆ ವೇಳೆ ಕಾಂಗ್ರೆಸ್ ನಾಯಕರು ಐ ಆಮ್ ಕಾಕ್ರೋಚ್ ಎಂಬ ಟೀ ಶರ್ಟ್ ಅನ್ನು ಬಿಡುಗಡೆ ಮಾಡಿದರು.

ನೀಟ್ ಪರೀಕ್ಷೆಯ ಅಕ್ರಮ ಖಂಡಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು ನಗರದ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಇದೇ ಸಂದರ್ಭದಲ್ಲಿ ಪಿಎಂ ಕಾಂಪ್ರಮೈಸ್, ಐ ಆಮ್ ಕಾಕ್ರೋಚ್ ಎಂಬ ಟೀ ಶರ್ಟ್ ಬಿಡುಗಡೆ ಮಾಡುವ ಮೂಲಕ ಕೇಂದ್ರ ಸರ್ಕಾರ ಮತ್ತು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರತಿಭಟನೆಯಲ್ಲಿ ಭಾಗಿಯಾಗಿ ಮಾತನಾಡಿದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಅವರು, 'ಮೋದಿ ಸರ್ಕಾರ ಶಿಕ್ಷಣ ಮಾಫಿಯಾಗೆ ಎಲ್ಲವನ್ನೂ ಒಪ್ಪಿಸಿಬಿಟ್ಟಿದೆ. ಹಿಂದಿನ ಬಿಜೆಪಿ ಸರ್ಕಾರ ಪೇಪರ್ ಲೀಕ್ ಗೆ ಹೆಸರುವಾಸಿಯಾ ಗಿತ್ತು. ನೂರಾರು ಎಕ್ಸಾಂ ಪೇಪರ್ ಗಳು ಬಿಜೆಪಿ ನಾಯಕರ ಮೂಗಿನ ಅಡಿಯಲ್ಲೇ ನಡೆದಿವೆ. ಇಂದು ಪ್ರಧಾನಿಗಳಿಗೆ ಇಲ್ಲಿಂದ ಆಗ್ರಹ ಮಾಡ್ತೇವೆ. ಮೋದಿಯವರು ಪರೀಕ್ಷಾ ಪೇ ಚರ್ಚಾ ಬಿಟ್ಟು ಪೇಪರ್ ಲೀಕ್ ಪೇ ಚರ್ಚೆ ಮಾಡಬೇಕು' ಎಂದರು.

ಬಳಿಕ ಉನ್ನತ ಶಿಕ್ಷಣ ಸಚಿವ ಎಂಸಿ ಸುಧಾಕರ್ ಅವರು ಮಾತನಾಡಿ, 'ನೀಟ್ ಅಕ್ರಮದಿಂದ ಬಹಳಷ್ಟು ವಿದ್ಯಾರ್ಥಿಗಳ ಭವಿಷ್ಯ ಇಂದು ಅತಂತ್ರವಾಗಿದೆ. 22 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಯಾರು ಕೋಚಿಂಗ್ ಸೆಂಟರ್ ನಡೆಸುತ್ತಿದ್ದರು ಅವರೇ ಇಂದು ಪ್ರಶ್ನೆ ಪತ್ರಿಕೆ ಸೋರಿಕೆ ಮಾಡಿದ್ದಾರೆ. ಇದೊಂದು ದೊಡ್ಡ ದಂಧೆ' ಎಂದು ಆರೋಪಿಸಿದರು.

## ಪ್ರಧಾನಿ ಮೋದಿ, ಶಾ ವಿರುದ್ಧ ಹೇಳಿಕೆ: ರಾಹುಲ್ ಗಾಂಧಿ ಕ್ಷಮೆ ಯಾಚಿಸಲು ವಿಜಯೇಂದ್ರ ಆಗ್ರಹ!



ಬೆಂಗಳೂರು: ಪಶ್ಚಿಮ ಬಂಗಾಳ, ಅಸ್ಸಾಂನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಇದನ್ನು ರಾಹುಲ್ ಗಾಂಧಿ ಅವರಿಗೆ ಸಹಿಸಲು ಆಗುತ್ತಿಲ್ಲ. ಅವರು ದೇಶದ ಜನರ ಕ್ಷಮೆ ಕೇಳಬೇಕು. ಇಲ್ಲದಿದ್ದರೆ ರಾಜ್ಯದಾದ್ಯಂತ ಹೋರಾಟ ನಡೆಸಲಾಗುವುದು ಎಂದು ಶಾಸಕರು ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಎಚ್ಚರಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಜೀ ಅವರ ಕುರಿತು ರಾಹುಲ್ ಗಾಂಧಿ ಅವರು ನೀಡಿದ ಹೇಳಿಕೆ ಖಂಡಿಸಿದ ವಿಜಯೇಂದ್ರ ಅವರು, ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷರಾಗಿದ್ದವರು ಈ ರೀತಿ ಬಾಲಿಷವಾಗಿ ಹೇಳಿಕೆ ನೀಡಬಾರದು ಎಂದರು.

ಎಲುಬಿಲ್ಲದ ನಾಲಿಗೆ ಏನೂ ಬೇಕಾದರೂ ನುಡಿಯಬಾರದು. ಪ್ರಧಾನಿ ಮತ್ತು ಕೇಂದ್ರ ಗೃಹ ಸಚಿವರ ಬಗ್ಗೆ ಅವಮಾನಕರವಾಗಿ ಮಾತನಾಡಬಾರದು. ಹಿಂದುಳಿದ ಸಮಾಜಕ್ಕೆ ಸೇರಿದ ಮೋದಿ ಅವರು ಪ್ರಧಾನಿಯಾಗಿ ಮೂರನೇ ಬಾರಿಗೆ ಕೇಂದ್ರದಲ್ಲಿ ಅಧಿಕಾರದಲ್ಲಿದ್ದಾರೆ. ದೇಶವನ್ನು ನಾಲ್ಕನೇ ಆರ್ಥಿಕ ಶಕ್ತಿಯಾಗಿ ಮಾಡಿದ್ದಾರೆ. ದೇಶದ ಅಭಿವೃದ್ಧಿ ಸಹಿಸದೆ ರಾಹುಲ್ ಗಾಂಧಿ ಅವರು ಈ ರೀತಿ ಮಾತನಾಡುತ್ತಿದ್ದಾರೆಯೇ ಎಂದು ಪ್ರಶ್ನಿಸಿದರು.

ಕಾಶ್ಮೀರದಲ್ಲಿ ಆರ್ಟಿಕಲ್ 370 ಅನ್ನು ಕಿತ್ತು ಹಾಕುವ ಧೈರ್ಯ ಕಾಂಗ್ರೆಸ್‌ಗೆ ಇರಲಿಲ್ಲ. ಅದನ್ನು ಕಿತ್ತು ಹಾಕಿದ್ದು ಅಮಿತ್ ಶಾ ಅವರು. ಇದಕ್ಕೆ ರಾಹುಲ್ ಗಾಂಧಿ ಅವರು ಅಮಿತ್ ಶಾ ಅವರನ್ನು ದೇಶದ್ರೋಹಿ ಎಂದು ಕರೆಯುತ್ತಾರೆಯೇ? ದೇಶದಲ್ಲಿ ನಕ್ಸಲರನ್ನು ಬುಡಸಮೇತ ನಾಶ ಮಾಡುವಲ್ಲಿ ಅಮಿತ್ ಶಾ ಅವರು ಕೆಲಸ ಮಾಡಿದ್ದಾರೆ. ಪ್ರಧಾನಿ ಮೋದಿ ಅವರು ಭ್ರಷ್ಟಾಚಾರ ರಹಿತ ಆಡಳಿತ ನೀಡಿದ್ದಾರೆ. ಅದನ್ನು ರಾಹುಲ್ ಗಾಂಧಿಗೆ ಸಹಿಸಲು ಆಗುತ್ತಿಲ್ಲ ಎಂದರು.

ಲಕ್ಷಾಂತರ ಜನರ ತ್ಯಾಗ ಬಲಿದಾನದಿಂದ ಸ್ವಾತಂತ್ರ್ಯ ಗಳಿಸಿದ ಭವ್ಯ ಭಾರತದಲ್ಲಿ ಭಯೋತ್ಪಾದನೆಯ ಬೀಜ ನೆಟ್ಟವರು ಯಾರು? ಅದಕ್ಕೆ ನೀರೆರೆದು ಪೋಷಿಸಿದವರು ಯಾರು? ಎಂಬುದು ಈ ದೇಶದ ಜನತೆಗೆ ತಿಳಿದಿದೆ. ಕಾಶ್ಮೀರದಲ್ಲಿ ಹಿಂದುಗಳ ನರಮೇಧ ನಡೆಯಿತು, ಹಿಂದೂಗಳನ್ನು ಮೂಲೋತ್ಪಾಟನೆ ಮಾಡಲಾಯಿತು. ಕಾಶ್ಮೀರವನ್ನು ರಕ್ಷಿಸದ ನೀವು ದೇಶದ್ರೋಹಿಯೋ, ದೇಶ ಪ್ರೇಮಿಯೋ? ವಿದೇಶಗಳಿಗೆ ಹೋಗಿ ಭಾರತದ ಗೌರವವನ್ನು ಹರಾಜು ಹಾಕಿದ ರಾಹುಲ್ ಗಾಂಧಿ ಅವರೇ ದೇಶದ್ರೋಹಿಯೋ, ದೇಶ ಪ್ರೇಮಿಯೋ? ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರನ್ನು ದೇಶದ್ರೋಹಿಗಳು ಎಂದು ಹೇಳುವ ಮೂಲಕ ರಾಹುಲ್ ಗಾಂಧಿ 'ಭಾರತ ವಿರೋಧಿ, ದೇಶದ್ರೋಹಿ' ಎನ್ನುವುದನ್ನು ಅನಾವರಣ ಮಾಡಿಕೊಂಡಿದ್ದಾರೆ ಎಂದು ಟೀಕಾ ಪ್ರಹಾರ ನಡೆಸಿದ್ದಾರೆ.

## ಶಾಸಕ ರಾಜು ಕಾಗೆ ಅವರ 68ನೇ ಹುಟ್ಟುಹಬ್ಬ: ಅಥಣಿಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ



**ಬೆಳಗಾವಿ ವಾರ್ತೆ ಅಥಣಿ:** ಕಾಗವಾಡ ಕ್ಷೇತ್ರದ ಶಾಸಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷರು ಹಾಗೂ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷರಾದ ರಾಜು ಕಾಗೆ ಅವರ 68ನೇ ಹುಟ್ಟು ಹಬ್ಬದ ಅಂಗವಾಗಿ ಅಥಣಿಯಲ್ಲಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು

ಅಥಣಿ ೦೨ ೨

ಕಾಂಗ್ರೆಸ್ ಮುಖಂಡ ಗಜಾನನ ಮಂಗಸೂಳಿ ಅಭಿಮಾನಿ ಬಳಗದ ವತಿಯಿಂದ ಸ್ಥಳೀಯ ಸರಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣಾ ಕಾರ್ಯಕ್ರಮ ಆಯೋಜನೆ ಮಾಡಿ ಮಾತನಾಡಿದ ಗಜಾನನ ಮಂಗಸೂಳಿ ಅವರು

ಶಾಸಕ ರಾಜು ಕಾಗೆ ಅವರು ಜನಪರ ಕಾಳಜಿಯ ನಾಯಕರಾಗಿದ್ದು, ಅವರ ಹುಟ್ಟುಹಬ್ಬವನ್ನು ಸಾಮಾಜಿಕ ಸೇವೆಯ ಮೂಲಕ ಆಚರಿಸಲು ಅಭಿಮಾನಿಗಳು ನಿರ್ಧಾರ ಮಾಡಿದ್ದುರಾಜು ಕಾಗೆ ಅವರು ಹಲವಾರು ವರ್ಷಗಳಿಂದ ಜನಪರ ಕಾರ್ಯಕ್ರಮ ಮಾಡಿಕೊಂಡು ಬಂದಿದ್ದು ಈ ಭಾಗದಲ್ಲಿ ಹಲವಾರು ಅಭಿವೃದ್ಧಿ ಕೆಲಸಗಳು ಮಾಡಿಕೊಂಡು ಬಂದಿದ್ದಾರೆ ದೇವರು ಅವರು ಅವರಿಗೆ ಹೆಚ್ಚಿನ ಸ್ಥಾನ ಮಾನ ಕೊಟ್ಟು ಕಾಪಾಡಲಿ ಎಂದು ಹಾರೈಸಿದರು

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದಾರ್ಥ ಸಿಂಗೆ ಪುರಸಭೆ ಸದಸ್ಯ ,ರಾವಸಾಬ ಐಹೊಳೆ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕಿ ಸುನೀತಾ ಐಹೊಳೆ, ಸುರೇಶಗೌಡ ಪಾಟೀಲ,ಚಿದಾನಂದ ತಳಕೇರಿ, ಬಾಬು ಖೇಮಲಾಪುರ, ಉಮರಸಯ್ಯದ ಗಡ್ಡೇಕರ, ರಿಯಾಜ್ ಅಹ್ಮದ ಸನದಿ, ರಾಜು ಬಿಳ್ಳೂರ ಚಿದಾನಂದ ಮುಕಣಿ, ಬಸವರಾಜ ಗುಮಟಿ, ಶಿವಾನಂದ ಸೌದಾಗರ, ಹಣಮಂತ ಅರ್ಥವೂರ, ಹಾಗೂ ಗಜಾನನ ಮಂಗಸೂಳಿ ಅಭಿಮಾನಿ ಬಳಗದವರು ಸೇರಿದಂತೆ ಹಲವು ಮುಖಂಡರು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಮೆಟ್ರಿಕ ಪೂರ್ವ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಮೋಳೆ;-** ಕಾಗವಾಡ ಹಾಗೂ ಅಥಣಿ ತಾಲೂಕಿನ ಹಿಂದೂಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ಕಲ್ಪಿಸಲು ಆನ್ ಲೈನ್ ಅರ್ಜಿ ಆಹ್ವಾನಿಸಲಾಗಿದೆ ಎಂದು ತಾಲೂಕಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ವೆಂಕಟೇಶ ಕುಲಕರ್ಣಿ ತಿಳಿಸಿದರು.

ಪ್ರವೇಶ ಬಯಸುವವರು ಪ್ರವರ್ಗ 1,2ಎ,3ಎ,3ಬಿ ಪ.ಜಾ ಮತ್ತು ಪ.ವರ್ಗದ 5 ನೇ ತರಗತಿಯಿಂದ 10 ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ2026-27 ನೇ ಸಾಲಿಗೆ ಆನ್ ಲೈನ್ ಮೂಲಕ ಮೆಟ್ರಿಕ್ ಪೂರ್ವ ಬಾಲಕರ ವಸತಿನಿಲಯ ಅಥಣಿ, ಕೊಕಟನೂರ, ಐಗಳಿ, ತೆಲಸಂಗ,ಬಾಡಗಿ, ಶಿವನೂರ, ಅನಂತಪೂರ,ಮದಭಾವಿ, ಖಿಳೇಗಾಂವ, ಮೋಳೆ, ಕಾಗವಾಡ, ಶಿರಗುಪ್ಪಿ, ಹಾಗೂ ಮೆಟ್ರಿಕ ಪೂರ್ವ ಬಾಲಕಿಯರ ವಸತಿ ನಿಲಯ ಅಥಣಿ, ಅಡಹಳ್ಳಿ ಇಲ್ಲಿಗೆ ಅರ್ಜಿ ಆಹ್ವಾನಿಸಲಾಗಿದೆ.



ವೆಂಕಟೇಶ ಕುಲಕರ್ಣಿ

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1,ಎಸ್,ಸಿ, ಎಸ್,ಟಿ ರೂ 2.50 ಲಕ್ಷ ಮತ್ತು ಪ್ರವರ್ಗ 2ಎ,2ಬಿ,3ಬಿಗಳಿಗೆ 1 ಲಕ್ಷ.ಪ್ರವೇಶ ಕೋರಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ 8 ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಅಥಣಿ ಈ ಕಚೇರಿಗೆ ಸಂಪರ್ಕಿಸಲು ವೆಂಕಟೇಶ ಕುಲಕರ್ಣಿ ಪತ್ರಿಕಾ ಪ್ರಕಟನೆಯ ಮೂಲಕ ಕೋರಿದ್ದಾರೆ

## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ: ಮೇ 27ಕ್ಕೆ ಪ್ರತಿಭಾ ಪುರಸ್ಕಾರ ಸಮಾರಂಭ

**ಬೆಳಗಾವಿ ವಾರ್ತೆ ಅಥಣಿ:** ಚಲವಾದಿ (ಬಲಗೈ) ಸಮುದಾಯ ನೌಕರರ ಸಂಘ (ರಿ.) ಅಥಣಿ ಇವರ ಆಶ್ರಯದಲ್ಲಿ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ದ್ವಿತೀಯ ವರ್ಷದ ವಾರ್ಷಿಕ ಪರೀಕ್ಷೆಗಳಲ್ಲಿ ಶೇ. 80% ಕ್ಕಿಂತ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿಯ ಬಲಗೈ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪ್ರೋತ್ಸಾಹ ಧನ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಚಲವಾದಿ (ಬಲಗೈ) ಸಮುದಾಯ ನೌಕರರ ಸಂಘದ ಅಧ್ಯಕ್ಷ ಮಹಾಲಿಂಗ ಮೇತ್ರಿ ಹೇಳಿದರು ಅವರು ಅಥಣಿ ಪ್ರವಾಸಿ ಮಂದಿರದಲ್ಲಿ ಪತ್ರಕಾಗೋಷ್ಠಿಯಲ್ಲಿ ಮಾತನಾಡಿ ಬರುವ ಮೇ ದಿ 27. 2026 ರಂದು ಅಥಣಿ ಪಟ್ಟಣದ ಶಿವಣಗಿ ಮಂಗಲ ಕಾರ್ಯಾಲಯದಲ್ಲಿ ಈ ಪುರಸ್ಕಾರ ಕಾರ್ಯಕ್ರಮ ನಡೆಯಲಿದೆ

ಸಾವಿರಾರು ವರ್ಷಗಳಿಂದ ಶೋಷಣೆಗೆ ಒಳಪಟ್ಟ ಎಸ್.ಸಿ, ಸಮುದಾಯಗಳಿಗೆ ಡಾ. ಬಾಬಾಸಾಹೇಬ ಅಂಬೇಡ್ಕರರು ತಮ್ಮ ಹೋರಾಟದ ಮೂಲಕ ಸ್ವಾಭಿಮಾನದ ಬದುಕನ್ನು ಕಟ್ಟಿಕೊಟ್ಟಿದ್ದಾರೆ. ಅವರ ಆಶಯದಂತೆ ಸಮುದಾಯದವರು ಶಿಕ್ಷಣ ಮತ್ತು ಸರಕಾರಿ ನೌಕರಿಗಳನ್ನು ಪಡೆಯುವಂತಾಗಿದೆ ಆದರೆ ಪ್ರಸ್ತುತ ಜಾಗತೀಕರಣ ಖಾಸಗೀಕರಣ ಮತ್ತು ಉದಾರೀಕರಣದ ಪರಿಣಾಮದಿಂದ ಯುವಕರ ಶೈಕ್ಷಣಿಕ ಮಟ್ಟ ಕುಸಿಯುತ್ತಿದೆ ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳನ್ನು ಜಾಗೃತಗೊಳಿಸಿ ಸುಶಿಕ್ಷಿತರನ್ನಾಗಿಸಲು ಪ್ರೇರೇಪಿಸುವುದು ಅತ್ಯಗತ್ಯವಾಗಿದೆ ಈ ಸಮಾರಂಭಕ್ಕೆ ದಿವ್ಯ ಸಾನಿಧ್ಯ ವಿಜಯಪೂರದ ಪೂಜ್ಯ ಬಂತೇಜೀ ಪ್ರಜ್ಞಾಬೋಧಿ ಥೇರೋ ಅಧ್ಯಕ್ಷತೆ ಐಪಿಎಸ್ ಅಧಿಕಾರಿಗಳು ಆಯುಷ್ಮಾನ ರವಿಂದ್ರ ಗಡಾದಿ, ಮುಖ್ಯ ಅಥಿತಿಗಳಾಗಿ ಬೆಂಗಳೂರಿನ ಅಕ್ಕ ಐಎಎಸ್ ಅಕಾಡಮಿ ನಿರ್ದೇಶಕ ಶಿವಕುಮಾರ, ಉಪನ್ಯಾಸಕ ರಾಗಿ ಆಯುಷ್ಮಾನ ಬಿ ಸಂತೋಷ, ಡಾ.ಗೀತಾ ಕಾಂಬಳೆ, ಡಾ.ವಿಲಾಸ ಕಾಂಬಳೆ, ಅವರು ಆಗಮಿಸಲಿದ್ದಾರೆ ಈ ನಿಟ್ಟಿನಲ್ಲಿ ಚಲವಾದಿ ಸಮುದಾಯ ನೌಕರರ ಸಂಘ ಹಾಗೂ ಅಥಣಿ ತಾಲೂಕಿನ ವಿವಿಧ ದಲಿತ ಪರ ಸಂಘಟ ನೆಗಳು, ನ್ಯಾಯವಾದಿಗಳು ಮತ್ತು ಪತ್ರಕತ ರ್ರು ಈ ಕಾರ್ಯಕ್ರಮದ ಆಯೋ ಜಬೆಯಲ್ಲಿ ಪಾಲ್ಗೊಳ್ಳಲಿದ್ದು. ಅಥಣಿ ಮತ್ತು ಕಾಗವಾಡ ತಾಲೂಕುಗಳ ಪ್ರತಿಭಾವಂತ ವಿದ್ಯಾರ್ಥಿಗಳು ಪುರಸ್ಕಾರ ಕಾರ್ಯಕ್ರಮಕ್ಕೆ ಬಂದು ಶೋಭೆ ತರಬೇಕಾಗಿ ವಿನಂತಿಸಿದರು.



ಈ ವೇಳೆ ಸಂಘಟನೆಯ ಕಾರ್ಯದರ್ಶಿ ಮಹಾಂತೇಶ ಕಾಂಬಳೆ,ಎ ಬಿ ಕುಟಗೋಳಿ,ಭರತ ಕಾಂಬಳೆ,ಸಂಜು ತಳವಲಕರ,ರವಿ ಕಾಂಬಳೆ,ಮಹಾಂತೇಶ ಬಾಡಗಿ,ರಾಮ ಮರೇಳರ,ದಯಾನಂದ ವಾಘಮೊರೆ,ಸಿದ್ಧಾರ್ಥ್ ಸಿಂಗೆ, ಪರಶುರಾಮ ತುಬಚಿ,ಭೀಮು ಕಾಂಬಳೆ, ರಾಕೇಶ ಮೈಗೂರ,ವಿಲಾಸ ಕಾಂಬಳೆ, ರಮೇಶ ಬಾದವಾಡಗಿ,ಬಾಹುಸಾಹೇಬ ದೊಡ್ಡಮನಿ,ಶಿವರಾಮ ಕಾಂಬಳೆ, ಶ್ರೀಮತಿ.ಜಯಶ್ರೀ ಕಾಂಬಳೆ ಸೇರಿದಂತೆ ಹಲವು ಮುಖಂಡರು ಭಾಗಿಯಾಗಿದ್ದರು



**ಬೆಳಗಾವಿ ವಾರ್ತೆ ಗೋಕಾಕ:** ಇಲ್ಲಿಯ ಶಿಕ್ಷಣ ಇಲಾಖೆಯ ಸಮೂಹ ಸಂಪನ್ಮೂಲ ವ್ಯಕ್ತಿ ಮಧುಮತಿ ಪಾಟೀಲ ಇವರಿಗೆ ಸಾಧಕ ರತ್ನ ರಾಜ್ಯ ಪ್ರಶಸ್ತಿ ದೊರೆತ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕ ಘಟಕದ ಸಹಕಾರ್ಯದರ್ಶಿಯಾಗಿ ಆಯ್ಕೆಯಾದ ನಿಮಿತ್ಯ ಶಿಕ್ಷಕರ ಸಂಘ ಹಾಗೂ ಹಿತೈಷಿಗಳು ನಗರದಲ್ಲಿ ಮಂಗಳವಾರದಂದು ಸತ್ಕರಿಸಿದರು.

ಬಿಸಿಯೂಟ ಯೋಜನಾಧಿಕಾರಿ ಎ ಬಿ ಮಲಬನ್ನವರ, ಸಂಘದ ಜಿಲ್ಲಾಧ್ಯಕ್ಷ ಎಸ್ ಎಮ್ ಲೋಕನ್ನವರ, ತಾಲೂಕ ಪದಾಧಿಕಾರಿಗಳಾದ ಎಸ್ ಬಿ ಕಲ್ಲಟ್ಟಿ, ಕೆ ಕೆ ಹೊಳಕರ, ಎಸ್ ಎಸ್ ನಾಯಿಕ, ಕಬ್ಬೂರ, ಕಮ್ಮಾರ ಸೇರಿದಂತೆ ಅನೇಕರು ಇದ್ದರು.

# ಅಖಿಲ ಭಾರತ ಸಮನ್ವಿತ ಸಜ್ಜೆ, ಜೋಳ ಮತ್ತು ಸಿರಿಧಾನ್ಯ ಯೋಜನೆಗಳ 2026ರ ವಾರ್ಷಿಕ ಗುಂಪು ಸಮಾವೇಶದ ಉದ್ಘಾಟನೆ




**ಬೆಳಗಾವಿ ವಾರ್ತೆ ಧಾರವಾಡ:** ಭಾರತೀಯ ಕೃಷಿ ಅನುಸಂಧಾನ ಪರಿಷತ್ನ ಸಜ್ಜೆ, ಜೋಳ ಹಾಗೂ ಸಿರಿಧಾನ್ಯ ಗಳ ಅಖಿಲ ಭಾರತ ಸಂಯೋಜಿತ ಸಂಶೋಧನಾ ಯೋಜನೆಗಳ ಸಂಯುಕ್ತ ವಾರ್ಷಿಕ ಗುಂಪು ಸಭೆಯನ್ನು 2026ರ ಮೇ 18ರಿಂದ 20ರವರೆಗೆ ಕೃಷಿ ವಿಶ್ವವಿದ್ಯಾಲಯ, ಧಾರವಾಡದಲ್ಲಿ ಆಯೋಜಿಸಲಾಗಿದೆ. ಉದ್ಘಾಟನಾ ಕಾರ್ಯಕ್ರಮವು 19.05. 2026 ರಂದು ಜರುಗಿದ್ದು ಐಸಿಎಆರ್, ನವದೆಹಲಿ ಬೆಳೆ ವಿಜ್ಞಾನ ವಿಭಾಗದ ಉಪ ಮಹಾನಿರ್ದೇಶಕರಾದ ಡಾ. ಡಿ. ಕೆ. ಯಾದವ ಕಾರ್ಯಕ್ರಮವನ್ನು ಉದ್ಘಾಟಿಸಿದರು. ತಮ್ಮ ಉದ್ಘಾಟನಾ ಭಾಷಣದಲ್ಲಿ ಸಿರಿಧಾನ್ಯಗಳ ವಿವಿಧ ಕೇಂದ್ರಗಳಲ್ಲಿ ನಡೆಯುತ್ತಿರುವ ಸಂಶೋಧನಾ ಕಾರ್ಯವನ್ನು ಶ್ಲಾಘಿಸಿ, ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದರು. ಜೊತೆಗೆ, ಸರಿಯಾದ ತಳಿಯ ಬೀಜಗಳು ಸರಿಯಾದ ಸಮಯದಲ್ಲಿ ರೈತರಿಗೆ ಲಭ್ಯವಾಗುವ ವ್ಯವಸ್ಥೆಯ ಕುರಿತು ಹೆಚ್ಚಿನ ಗಮನ ಹರಿಸಬೇಕೆಂದು ತಿಳಿಸಿದರು. ನೈಸರ್ಗಿಕ ಸಂಪನ್ಮೂಲ ನಿರ್ವಹಣೆ, ಕೃಷಿಶಾಸ್ತ್ರ, ಜೈವಿಕ ಹಾಗೂ ಇತರ ಸಸ್ಯ ಸಂರಕ್ಷಣಾ ಘಟಕಗಳನ್ನು ಬಲಪಡಿಸಿ, ಸಿರಿಧಾನ್ಯಗಳ ವಿಸ್ತೀರ್ಣ, ಉತ್ಪಾದನೆ ಹಾಗೂ ಉತ್ಪಾದಕತೆ ಹೆಚ್ಚಿಸಲು ರೈತರಿಗೆ ಅನುಕೂಲಕರ ಶಿಫಾರಸುಗಳನ್ನು ನೀಡಬೇಕೆಂದು ಹೇಳಿದರು.

ಸಜ್ಜೆ ಯೋಜನೆಯ ಯೋಜನಾ ಸಂಯೋಜಕರಾದ ಡಾ. ಎಸ್. ಎನ್. ಸಕ್ಸೇನಾ ಹಾಗೂ ಜೋಳ ಮತ್ತು ಸಣ್ಣ ಸಿರಿಧಾನ್ಯಗಳ ಯೋಜನಾ ಸಂಯೋಜಕರಾದ ಡಾ. ಆರ್ ಮಧುಸೂಧನ ಅವರು ವಿವಿಧ ಕೇಂದ್ರಗಳಲ್ಲಿ ಕೈಗೊಳ್ಳಲಾದ ಸಂಶೋಧನಾ ಮುಖ್ಯಾಂಶಗಳನ್ನು ಮಂಡಿಸಿದರು. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಡಾ. ಎಸ್. ಕೆ. ಪ್ರಧಾನ ಅವರು, ಸಿರಿಧಾನ್ಯಗಳು ಪೌಷ್ಟಿಕ ಧಾನ್ಯಗಳಾಗಿದ್ದರೂ ಅವುಗಳ ಪ್ರಗತಿ ನಿರೀಕ್ಷಿತ ಮಟ್ಟದಲ್ಲಿ ಆಗಿಲ್ಲ ಎಂದು ಅಭಿಪ್ರಾಯಪಟ್ಟರು. "ವಿಕಸಿತ ಭಾರತ" ನಿರ್ಮಾಣದ ಗುರಿ ಸಾಧಿಸಲು ಜೀನೋಟೈಪಿಂಗ್ ಹಾಗೂ ರೈತರ ಪಾಲ್ಗೊಳ್ಳುವಿಕಾಧಾರಿತ ವಿಧಾನಗಳನ್ನು ಅಳವಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕೆಂದು ಕರೆ ನೀಡಿದರು. ಸಿರಿಧಾನ್ಯಗಳನ್ನು ಜಾಗತಿಕವಾಗಿ ಉಷ್ಣ, ಅರೆಉಷ್ಣ ಹಾಗೂ ಸಮಶೀತೋಷ್ಣ ವಲಯ ಪ್ರದೇಶಗಳಲ್ಲಿ ಪ್ರಮುಖವಾಗಿ ಬೆಳೆಯಲಾಗುತ್ತಿದೆ. ಡಾ. ಸಿ. ತಾರಾ ಸತ್ಯವತಿ, ಅವರು ಸಿರಿಧಾನ್ಯಗಳ ಮಹತ್ವ ಮತ್ತು ಪ್ರಸ್ತುತ ಪರಿಸ್ಥಿತಿಯ ಕುರಿತು ಪ್ರಾಥಮಿಕ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಅಧ್ಯಕ್ಷೀಯ ಭಾಷಣದಲ್ಲಿ ಕೃ.ವಿ.ವಿ., ಧಾರವಾಡದ ಮಾನ್ಯ ಕುಲಪತಿಗಳಾದ ಡಾ. ಪಿ. ಎಲ್. ಪಾಟೀಲ ಅವರು ಎಲ್ಲಾ ಎಐಸಿಆರ್ಪಿ ಸಿರಿಧಾನ್ಯ ಕೇಂದ್ರಗಳ ಸಾಧನೆಯನ್ನು ಪ್ರಶಂಸಿಸಿದರು. ಈ ಸಮ್ಮೇಳನದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಸಜ್ಜೆ, ಜೋಳ ಹಾಗೂ ಸಿರಿಧಾನ್ಯಗಳ ವಿಜ್ಞಾನಿಗಳು ಭಾಗವಹಿಸಿದ್ದರು.

ಕಾರ್ಯಕ್ರಮವು ಪ್ರಾರ್ಥನೆಯೊಂದಿಗೆ ಆರಂಭಗೊಂಡು, ಕೃಷಿ ವಿಶ್ವವಿದ್ಯಾಲಯ ಧಾರವಾಡದ ಸಂಶೋಧನಾ ನಿರ್ದೇಶಕರಾದ ಡಾ. ಎ. ಎಸ್. ಸಜ್ಜನ ಅವರು ಸ್ವಾಗತ ಹಾಗೂ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದ ವಂದನಾರ್ಪಣೆಯನ್ನು ಡಾ. ಎನ್. ಜಿ. ಹನಮರಟ್ಟಿ ಅವರು ನೆರವೇರಿಸಿದರು.

# ಕಡಕೋಳ ಹಾಗೂ ಛಬ್ಬಿ ಗ್ರಾಪಂಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ ಆರ್ ವಿ ದೊಡ್ಡಮನಿ ಭೇಟಿ; ಕಾಮಗಾರಿ ಪರಿಶೀಲನೆ



**ಬೆಳಗಾವಿ ವಾರ್ತೆ ಶಿರಹಟ್ಟಿ:** ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಆರ್ ವಿ ದೊಡ್ಡಮನಿ ಅವರು ಕಡಕೋಳ ಮತ್ತು ಛಬ್ಬಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಸಮುದಾಯ ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿಕಾರ್ಮಿಕರ ಜೊತೆಯಲ್ಲಿ ಮಾತನಾಡಿದ ಅವರು ಪ್ರತಿ ಕೂಲಿ ಕಾರ್ಮಿಕರಿಗೆ ಆಳತೆಯ ಪ್ರಕಾರ ಕೆಲಸ ಮಾಡಿದರೆ 370ಗಳು ರೂಪಾಯಿಗಳು ದೊರೆಯುತ್ತವೆ. ಹಿರಿಯ ನಾಗರಿಕರಿಗೆ ಗರ್ಭಿಣಿಯರಿಗೆ ಅಂಗವಿಕಲರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ಇರುತ್ತದೆ. ಎಲ್ಲಾ ಕೂಲಿ ಕಾರ್ಮಿಕರು ಅಳತೆಗೆ ತಕ್ಕ ಕೆಲಸವನ್ನು ಮಾಡಿ ಎರಡು ಬಾರಿ ಹಾಜರಾತಿ ಹಾಕಬೇಕು ಎರಡು ಬಾರಿ ಹಾಜರಾತಿ ಹಾಕದಿದ್ದರೆ ಕೂಲಿ ಹಣ ಪಾವತಿ ಆಗುವುದಿಲ್ಲ ಎಲ್ಲರೂ ಸರಿಯಾಗಿ ಕೆಲಸವನ್ನು ನಿರ್ವಹಿಸಿ 370 ರೂ ಕೂಲಿಯನ್ನ ಪಡೆದುಕೊಳ್ಳಿ ಎಂದು ತಿಳಿಸಿದರು.

ಕೂಲಿಕಾರರು ಆರೋಗ್ಯವನ್ನು ಸರಿಯಾಗಿ ಇಟ್ಟುಕೊಳ್ಳಬೇಕು, ಮುಂಜಾನೆ ಬೇಗ ಬಂದು ಅಳತೆಗೆ ತಕ್ಕ ಕೆಲಸ ನೀಡಿ ಬೇಗ ಮುಗಿಸಿಕೊಂಡು ಹಾಜರಾತಿ ನೀಡಿ ಮನೆಗೆ ಹೋಗಬೇಕು, ಎರಡು ಬಾರಿ ಹಾಜರಾತಿ ನೀಡಿದವರಿಗೆ 370 ರೂ ಕೂಲಿ ಜಮೆ ಆಗಲಿದೆ ಎಂದರು.

ಕೆಲಸದಿಂದ ಬಂದ ಕೂಲಿ ಹಣವನ್ನು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳಿ, ಮಕ್ಕಳ ಶಿಕ್ಷಣದ ಅಗತ್ಯತೆಗಳಿಗೆ, ಬಳಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿಯ ಎಲ್ಲಾ ಸಿಬ್ಬಂದಿ ವರ್ಗದವರು ನೇರೆಗಾ ಕೂಲಿ ಕಾರ್ಮಿಕರು ಇದ್ದರು.

ಈ ವೇಳೆ ಕಡಕೋಳ ಪಂಚಾಯತಿಯ ಅಭಿವೃದ್ಧಿ ಅಧಿಕಾರಿ ಶಿವಾನಂದ ಮಾಳವಾಡ, ಛಬ್ಬಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಸುಜಾತಾ ಕಪ್ಪಲಿ, ಟಿ ಐ ಇ ಸಿ ವಿರೇಶ್ ಪಟ್ಟಣಶೆಟ್ಟಿ, ತಾಂತ್ರಿಕ ಸಹಾಯಕ ಆಂಜನೇಯ, ಲಿಂಗರಾಜ, ಬಿ ಎಫ್ ಟಿ, ಡಿ ಇ ಓ, ಕಾಯಕ ಬಂಧುಗಳು, ನರೇಗಾ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ವ್ಯವಸ್ಥಿತವಾಗಿ, ಯಶಸ್ವಿಯಾಗಿ ಜರುಗಲು ರಾಜಕೀಯ ಪಕ್ಷಗಳ ಸಹಕಾರ ಅಗತ್ಯ: ಜಿಲ್ಲಾ ಚುನಾವಣಾ ಅಧಿಕಾರಿ ಸ್ನೇಹಲ್ ಆರ್

**ಬೆಳಗಾವಿ ವಾರ್ತೆ ಧಾರವಾಡ:** ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದನ್ವಯ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣ ಕಾರ್ಯವು ಜರುಗಲಿದೆ. ಪರಿಷ್ಕ ರಣೆ ಕಾರ್ಯವು ಸುವ್ಯವಸ್ಥಿತವಾಗಿ ಮತ್ತು ಯಶಸ್ವಿಯಾಗಿ ಜರುಗಿಸಲು ಎಲ್ಲ ರಾಜ ಕೀಯ ಪಕ್ಷಗಳ ಸಹಕಾರವು ಜಿಲ್ಲಾ ಡಳಿತಕ್ಕೆ ಅಗತ್ಯವಾಗಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.




ಅವರು ಇಂದು (ಮೇ.20) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 (Special Intensive Revision) ಕೈಗೊಳ್ಳುವ ಕುರಿತು ಭಾರತ ಚುನಾವಣಾ ಆಯೋಗ ಹೊರಡಿಸಿರುವ ವೇಳಾ ಪಟ್ಟಿಯ ಬಗ್ಗೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ಜರುಗಿಸಿ, ಮಾತನಾಡಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು 2002–04 ರ ನಂತರ ಅಂದರೆ 20 ವರ್ಷಗಳ ನಂತರ ಜರಗುತ್ತಿದೆ. ಚುನಾವಣೆಗಳಿಗಾಗಿ ಮತದಾರರ ಪಟ್ಟಿಯ ಸಮಗ್ರತೆಯನ್ನು ಕಾಪಾಡಿಕೊಳ್ಳುವುದು ಅವಶ್ಯವಾಗಿರುತ್ತದೆ. ಮತದಾರರ ಪಟ್ಟಿಗಳಲ್ಲಿನ ಮತದಾರರ ಗಮನಾರ್ಹ ಬದಲಾವಣೆಗಳು. ಪುನಾವರ್ತಿತ ನಮೂದುಗಳು, ತ್ವರಿತ ನಗರೀಕರಣ ಮತ್ತು ಶಿಕ್ಷಣ ಹಾಗೂ ಜೀವನೋಪಾಯಕಕ್ಕಾಗಿ ವಲಸೆಯಾಗಿರುವ ಸಾಧ್ಯತೆ ಇರುತ್ತದೆ. ಮರಣ, ಪುನರಾವರ್ತನೆಯಾದ ಮತದಾರರ ಹೆಸರುಗಳು, ವಿದೇಶಿ ಮತದಾರರ ಹೆಸರುಗಳನ್ನು ತೆಗೆದುಹಾಕಲು ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಸಹಾಯ ವಾಗುತ್ತದೆ. ಈ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳು ಸಹಕಾರ ನೀಡಬೇಕು. ಮತ್ತು ಮತಗಟ್ಟೆ ಮಟ್ಟದಲ್ಲಿ ನೇಮಿಸಿರುವ ಬಿಎಲ್ಎ ಗಳು ಸಕ್ರೀಯವಾಗಿ ತೊಡಗಿಸಿಕೊಂಡು, ಬಿಎಲ್ಓ ಗಳಿಗೆ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿಗ ಸ್ನೇಹಲ್ ಆರ್. ಅವರು ಹೇಳಿದರು.

ಜಿಲ್ಲೆಯಲ್ಲಿ ಈಗಾಗಲೇ ಮತದಾರರ ಮ್ಯಾಪಿಂಗ್ ಕಾರ್ಯವು ಪ್ರಗತಿಯಲ್ಲಿದ್ದು, ಬಿಎಲ್ಎ ಗಳು ಪೂರ್ಣ ಪ್ರಮಾಣದ ಪ್ರಗತಿ ಸಾಧಿಸಲು ಬಿಎಲ್ಓ ಗಳಿಗೆ ಸಹಕರಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾಧಿಕಾರಿಗಳು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ವೇಳಾ ಪಟ್ಟಿಯನ್ನು ವಿವರಿಸಿದರು. ಸಭೆಯಲ್ಲಿ ಎಡಿಸಿ ಗೀತಾ ಸಿ.ಡಿ., ಎಲ್ಲ ತಾಲೂಕುಗಳ ತಹಶೀಲ್ದಾರರು, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಪ್ರಕಾಶ ಹಳಿಯಾಳ, ಭಾರತೀಯ ಜನತಾ ಪಕ್ಷದ ಸಿದ್ದು ಕಲ್ಯಾಣ ಶೆಟ್ಟಿ, ಶಂಕರ ಮುಗದ, ಜ್ಯಾತಾತೀತ ಜನತಾದಳ 'ದ ಪಕ್ಷದ ದೇವರಾಜ ಕಂಬಳಿ, ಮಂಜುನಾಥ ಎಲ್.ಹಗೇದಾರ, ಜೆಡಿಯು ಪಕ್ಷ ಶ್ರೀಶೈಲಗೌಡ ಕಮತರ, ಬಹುಜನ ಸಮಾಜ ಪಕ್ಷದ ನಿಂಗಪ್ಪ.ರು. ಕುಡುವಕ್ಕ ಲಿಗರ ಹಾಗೂ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮೆಟ್ರಿಕ ಪೂರ್ವ, ಮೆಟ್ರಿಕ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** 2026–27ನೇ ಸಾಲಿಗಾಗಿ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಡಾ॥ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ ಪೂರ್ವ (5 ರಿಂದ 10ನೇ ತರಗತಿಯವರೆಗೆ) ಮತ್ತು ಮೆಟ್ರಿಕ ನಂತರದ (10ನೇ ತರಗತಿ ನಂತರ) ಸರಕಾರಿ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ ಪೂರ್ವ ವಿದ್ಯಾರ್ಥಿ ನಿಲಯಗಳಿಗೆ ಜೂನ್ 30, 2026 ಮತ್ತು ಮೆಟ್ರಿಕ ನಂತರದ ವಿದ್ಯಾರ್ಥಿ ನಿಲಯಗಳಿಗೆ ಜುಲೈ 31, 2026 ರೊಳಗಾಗಿ ಆನ್‌ಲೈನ್ ವೆಬ್‌ಸೈಟ್ www.sw.kar.nic.in ಮೂಲಕ ಅರ್ಜಿ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂನ್ 30 ರಿಂದ ಅಕ್ಟೋಬರ್ 07 ವರೆಗೆ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ 2026 ನಡೆಯಲಿದೆ; ಪರಿಷ್ಕರಣೆ ಕಾರ್ಯ ಸುವ್ಯವಸ್ಥಿತವಾಗಿ ಜರುಗಿಸಲು ಸಾರ್ವಜನಿಕರು, ರಾಜಕೀಯ ಪಕ್ಷಗಳು ಸಹಕಾರ ನೀಡಬೇಕು



**ಬೆಳಗಾವಿ ವಾರ್ತೆ ಧಾರವಾಡ:** ಭಾರತ ಚುನಾವಣಾ ಆಯೋಗದ ಪ್ರಕಟಣೆ ಅನುಸಾರ ಜಿಲ್ಲೆಯಲ್ಲಿ ಜೂನ್ 30 ರಿಂದ ಅಕ್ಟೋಬರ್ 07 ವರೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಜರುಗಲಿದೆ. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಸುವ್ಯವಸ್ಥಿತವಾಗಿ ಜರುಗಿಸಲು ಜಿಲ್ಲಾಡಳಿತಕ್ಕೆ ಜಿಲ್ಲೆಯ ಸಾರ್ವಜನಿಕರು, ರಾಜಕೀಯ ಪಕ್ಷಗಳು ಸಹಕಾರ ನೀಡಬೇಕೆಂದು ಜಿಲ್ಲಾ ಚುನಾವಣಾ ಅಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದ್ದಾರೆ.

ಅವರು ಇಂದು (ಮೇ.20) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ–2026 (ಖಠಿಜಛಿಚಿಟ ಖಟಿಣಜಟಿಜಿತಜ ಖಜತಿಜಿಂಟಿ) ನೇದ್ದನ್ನು ಕೈಗೊಳ್ಳುವ ಕುರಿತು ಭಾರತ ಚುನಾವಣಾ ಆಯೋಗ ಹೊರಡಿಸಿರುವ ವೇಳಾ ಪಟ್ಟಿ ನಿಮಿತ್ಯ ಪತ್ರಿಕಾಗೋಷ್ಠಿ ಜರುಗಿಸಿ, ಮಾತನಾಡಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಯಶಸ್ವಿಯಾಗಲು ಎಲ್ಲರ ಸಹಕಾರ ಮುಖ್ಯ. ಈಗಾಗಲೇ ಮತದಾರರ ಮ್ಯಾಪಿಂಗ್ ಕಾರ್ಯವು ಶೇ. 89.94 ರಷ್ಟು ಆಗಿದ್ದು, ಪ್ರಗತಿಯಲ್ಲಿದೆ. ಮುಂದಿನ ದಿನಗಳಲ್ಲಿ ಮ್ಯಾಪಿಂಗ್ ಕಾರ್ಯವನ್ನು ಶೇ. 100 ರಷ್ಟು ಸಾಧಿಸುವ ಗುರಿ ಹೊಂದಲಾಗಿದೆ. ಮತಗಟ್ಟೆ ಮಟ್ಟದ ಏಜೆಂಟರು (ಬಿಎಲ್ಎ) ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಕ್ಷೇತ್ರಮಟ್ಟದಲ್ಲಿ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವೇಳಾಪಟ್ಟಿ: ಭಾರತ ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಎಸ್ಐಆರ್ ಅರ್ಹತಾ ಅವಧಿಯು ಅಕ್ಟೋಬರ್ 01, 2026 ವರೆಗಿದ್ದು, ಪೂರ್ವ ಸಿದ್ಧತೆ, ತರಬೇತಿ ಮತ್ತು ಮುದ್ರಣವು ಜೂನ್ 20 ರಿಂದ ಜೂನ್ 29, 2026 ರವರೆಗೆ ನಡೆಯುವುದು. ಜೂನ್ 30 ರಿಂದ ಜುಲೈ 29, 2026 ವರೆಗೆ ಬಿಎಲ್ಓ ನಿಂದ ಮನೆ ಮನೆಗೆ ಭೇಟಿ ನೀಡುವರು. ಜುಲೈ 29, 2026 ರಂದು ಮತಗಟ್ಟೆಗಳ ರ್‍ಯಾಶಲೈಜೆಶನ್‌ಗೊಳಿಸುವ ಕಾರ್ಯವು ಜರುಗಲಿದೆ. ಕರಡು ಮತದಾರರ ಪಟ್ಟಿಯನ್ನು ಅಗಸ್ಟ್ 5, 2026 ರಂದು ಪ್ರಕಟಿಸಲಾಗುವುದು.

ಅಗಸ್ಟ್ 5 ರಿಂದ ಸೆಪ್ಟೆಂಬರ್ 4, 2026 ರವರೆಗೆ ಮತದಾರರು ಅಗತ್ಯವಿದ್ದಲ್ಲಿ, ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲಾವಧಿ ನೀಡಲಾಗುವುದು. ಸೆಪ್ಟೆಂಬರ್ 5 ರಿಂದ ಅಕ್ಟೋಬರ್ 3, 2026 ವರೆಗೆ ನೋಟಿಸ್ ಹಂತ, ಹಕ್ಕು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಸಲ್ಲಿಕೆಯಾಗುವ ಅರ್ಜಿಗಳ ವಿಲೇವಾರಿಗೊಳಿಸಲಾಗುವುದು. ಅಕ್ಟೋಬರ್ 07, 2026 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಅವರು ತಿಳಿಸಿದರು.

ಅಂಶಗಳು: ಭಾರತದ ಸಂವಿಧಾನದ 324 ನೇ ವಿಧಿ ಮತ್ತು ಪ್ರಜಾಪ್ರಾತಿನಿಧ್ಯ ಕಾಯ್ದೆ, 1950 ("ಖಕಂ 1950") ರನ್ವಯ ಸಂಸತ್ತು ಮತ್ತು ರಾಜ್ಯ ಶಾಸಕಾಂಗಗಳಿಗೆ ಚುನಾವಣೆಗಳನ್ನು ನಡೆಸುವ ಮತ್ತು ಮತದಾರರ ಪಟ್ಟಿಗಳ ತಯಾರಿಕೆಯ ಮೇಲ್ವಿಚಾರಣೆ, ನಿರ್ದೇಶನ ನೀಡುವ ಮತ್ತು ನಿಯಂತ್ರಣವನ್ನು ಚುನಾವಣಾ ಆಯೋಗಕ್ಕೆ ವಹಿಸಲಾಗಿದೆ.

ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ನಡೆಸಲು ಮತದಾರರ ಪಟ್ಟಿಯ ಸಮಗ್ರತೆಯನ್ನು ಕಾಪಾಡಿಕೊಳ್ಳುವುದು ಅವಶ್ಯವಾಗಿದೆ. ಪ್ರಜಾಪ್ರಾತಿನಿಧ್ಯ ಕಾಯ್ದೆ, 1950 ಮತ್ತು ಮತದಾರರ ನೋಂದಣಿ ನಿಯಮಗಳು, 1960 ರ ಅಡಿಯಲ್ಲಿ, ಚುನಾವಣಾ ಸಿಬ್ಬಂದಿ ನೇಮಕಾತಿ, ಮತದಾರರ ಅರ್ಹತೆ, ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ವಿಧಾನ ಮತ್ತು ಕಾರ್ಯವಿಧಾನ ಕುರಿತು ತಿಳಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಅರ್ಹತಾ ದಿನಾಂಕ:01.01.2002 ವನ್ನು ಆಧರಿಸಿ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆಯನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತದಾರರ ಪಟ್ಟಿಯನ್ನು ಸಿದ್ಧಪಡಿಸುವಾಗ, ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿದ ಬಗ್ಗೆ ಮತ್ತು ಅಂತಹ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಕೈಬಿಟ್ಟುಹೋಗದಂತೆ ಜಾಗೃತಿ ವಹಿಸಲಾಗುವುದು. ಸಂವಿಧಾನದ 326 ನೇ ವಿಧಿಯನ್ವಯ, ಭಾರತದ ನಾಗರಿಕರಾಗಿರುವ ಮತ್ತು ಅರ್ಹತಾ ದಿನಾಂಕಕ್ಕೆ ಹದಿನೆಂಟು ವರ್ಷ ಪೂರೈಸಿರುವ ಮತ್ತು ಯಾವುದೇ ಕಾನೂನಿನ ಅಡಿಯಲ್ಲಿ ಅನರ್ಹಗೊಳಿಸದೇ ಇರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಅರ್ಹನಾಗಿರುತ್ತಾನೆ ಎಂದು ಅವರು ತಿಳಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ: ಪ್ರತಿ ಚುನಾವಣೆಗೂ ಮೊದಲು ಮತದಾರರ ಪಟ್ಟಿಯ ಪರಿಷ್ಕರಣೆಯಾಗಬೇಕು. ಭಾರತ ಚುನಾವಣಾ ಆಯೋಗದ ಆದೇಶಗಳ ಪ್ರಕಾರ ವಾರ್ಷಿಕವಾಗಿ ಪರಿಷ್ಕರಿಸಲಾಗುತ್ತದೆ. ಮತದಾರರ ಪಟ್ಟಿಯ ವಿಶೇಷ ಸಮಗ್ರ, ಸಂಕ್ಷಿಪ್ತ ಪರಿಷ್ಕರಣೆ ಕಾರ್ಯವು ಸೂಕ್ತವೆಂದು ಭಾರತ ಚುನಾವಣಾ ಆಯೋಗವು ಅಭಿಪ್ರಾಯಪಟ್ಟಿದೆ.

ಮತದಾರನಾಗುವವರು ಭಾರತದ ನಾಗರಿಕನಾಗಿರಬೇಕು. ಕನಿಷ್ಠ 18 ವರ್ಷ ವಯಸ್ಸಾಗಿರಬೇಕು. ವಿಧಾನಸಭಾ ಕ್ಷೇತ್ರದ ಸಾಮಾನ್ಯ ನಿವಾಸಿಯಾಗಿರಬೇಕು. ಯಾವುದೇ ಕಾನೂನಿನಡಿಯಲ್ಲಿ ಅನರ್ಹಗೊಂಡಿರಬಾರದು ಎಂಬ ನಿಯಮಗಳಿವೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ದೇಶಾದ್ಯಂತ ಈಗಾಗಲೇ ಸುಮಾರು 10 ಬಾರಿ ಮತದಾರ ಪಟ್ಟಿಯ ಸಮಗ್ರ ಪರಿಷ್ಕರಣೆ ಕಾರ್ಯ ನಡೆದಿದೆ:1950–51 ಸಾಲಿನಲ್ಲಿ ಮೊದಲ ಪಟ್ಟಿಯನ್ನು ನವೆಂಬರ್ 15, 1951 ರಂದು ಸಿದ್ಧಪಡಿಸಲಾಯಿತು. 1952 ರಿಂದ 1956 ಸಾಲಿನಲ್ಲಿ ವಾರ್ಷಿಕವಾಗಿ ಶೇ.20 ರಷ್ಟು ರಾಜ್ಯಗಳಲ್ಲಿ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1957 ರಿಂದ 1960 ನೇ ಸಾಲಿನಲ್ಲಿ ವಾರ್ಷಿಕವಾಗಿ ಶೇ.33 ರಷ್ಟು ರಾಜ್ಯಗಳಲ್ಲಿ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1961 ರಲ್ಲಿ ನಗರ ಪ್ರದೇಶಗಳಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1965 ರಲ್ಲಿ ಶೇ. 40 ರಷ್ಟು ರಾಜ್ಯಗಳಲ್ಲಿ ಹಾಗೂ 1966 ರಲ್ಲಿ ಶೇ. 60 ರಷ್ಟು ರಾಜ್ಯಗಳಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ.

1983–84 ರಲ್ಲಿ ದೇಶಾದ್ಯಂತ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1987–89 ರಲ್ಲಿ ದೇಶಾದ್ಯಂತ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1993 ರಲ್ಲಿ ಜಮ್ಮು ಮತ್ತು ಕಾಶ್ಮೀರ ಹೊರತುಪಡಿಸಿ ದೇಶಾದ್ಯಂತ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. 1995 ರಲ್ಲಿ 24 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕೈಗೊಳ್ಳಲಾಗಿದೆ. 2002–04 ರಲ್ಲಿ 29 ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಅವಶ್ಯಕತೆ: ಚುನಾವಣೆಗಳಿಗಾಗಿ ಮತದಾರರ ಪಟ್ಟಿಯ ಸಮಗ್ರತೆಯನ್ನು ಕಾಪಾಡಿಕೊಳ್ಳುವುದು ಅವಶ್ಯವಾಗಿರುತ್ತದೆ. ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು 2004 ರವರೆಗೆ ನಿಯಮಿತ ಪ್ರಕ್ರಿಯೆಯಾಗಿತ್ತು. 20 ವರ್ಷಗಳ ನಂತರ ಸಮಗ್ರ ಮತದಾರರ ಪಟ್ಟಿಗಳ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ಮತದಾರರ ಪಟ್ಟಿಗಳಲ್ಲಿ ಗಮನಾರ್ಹ ಬದಲಾವಣೆಗಳು. ಪುನಾವರ್ತಿತ ನಮೂದುಗಳು, ತ್ವರಿತ ನಗರೀಕರಣ ಮತ್ತು ಶಿಕ್ಷಣ ಮತ್ತು ಜೀವನೋಪಾಯಕ್ಕಾಗಿ ವಲಸೆಯಾಗಿರುವ ಸಾಧ್ಯತೆ ಇರುತ್ತದೆ. ಮತ್ತು ಮತದಾರರ ಪಟ್ಟಿಯ ಗುಣಮಟ್ಟದ ಕುರಿತು ರಾಜಕೀಯ ಪಕ್ಷಗಳ ಆಕ್ಷೇಪಣೆಗಳು. ಮರಣ, ಪುನರಾವರ್ತನೆಯಾದ ಮತದಾರರ ಹೆಸರುಗಳು, ವಿದೇಶಿ ಮತದಾರರ ಹೆಸರುಗಳನ್ನು ತೆಗೆದುಹಾಕಲು ಸಹಾಯವಾಗುತ್ತದೆ.

ಪ್ರಸ್ತುತ ಜಿಲ್ಲೆಯಲ್ಲಿ ಮೇ 19, 2026 ರವರೆಗಿನ ಮತದಾರರ ವಿವರ: ನವಲಗುಂದ–69 ಮತಕ್ಷೇತ್ರದಲ್ಲಿ 234 ಮತಗಟ್ಟೆಗಳಿದ್ದು, 1,08,132 ಪುರುಷರು, 1,07,787 ಮಹಿಳೆಯರು, 9 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,15,928 ಮತದಾರರಿದ್ದಾರೆ.

ಕುಂದಗೋಳ–70 ಮತಕ್ಷೇತ್ರದಲ್ಲಿ 214 ಮತಗಟ್ಟೆಗಳಿದ್ದು, 99,713 ಪುರುಷರು, 96,637 ಮಹಿಳೆಯರು, 8 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 1,96,358 ಮತದಾರರಿದ್ದಾರೆ. ಧಾರವಾಡ–71 ಮತಕ್ಷೇತ್ರದಲ್ಲಿ 234 ಮತಗಟ್ಟೆಗಳಿದ್ದು, 1,12,215 ಪುರುಷರು, 1,13,420 ಮಹಿಳೆಯರು, 9 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,25,644 ಮತದಾರರಿದ್ದಾರೆ. ಹುಬ್ಬಳ್ಳಿ–ಧಾರವಾಡ ಪೂರ್ವ–72 ಮತಕ್ಷೇತ್ರದಲ್ಲಿ 218 ಮತಗಟ್ಟೆಗಳಿದ್ದು, 1,12,573 ಪುರುಷರು, 1,16,273 ಮಹಿಳೆಯರು, 19 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,28,865 ಮತದಾರರಿದ್ದಾರೆ.

ಹುಬ್ಬಳ್ಳಿ–ಧಾರವಾಡ ಕೇಂದ್ರ–73 ಮತಕ್ಷೇತ್ರದಲ್ಲಿ 266 ಮತಗಟ್ಟೆಗಳಿದ್ದು, 1,32,760 ಪುರುಷರು, 1,38,057 ಮಹಿಳೆಯರು, 37 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,70,854 ಮತದಾರರಿದ್ದಾರೆ.

ಹುಬ್ಬಳ್ಳಿ–ಧಾರವಾಡ ಪಶ್ಚಿಮ–74 ಮತಕ್ಷೇತ್ರದಲ್ಲಿ 271 ಮತಗಟ್ಟೆಗಳಿದ್ದು, 1,37,224 ಪುರುಷರು, 1,45,337 ಮಹಿಳೆಯರು, 9 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,82,570 ಮತದಾರರಿದ್ದಾರೆ.

ಕಲಘಟಗಿ–75 ಮತಕ್ಷೇತ್ರದಲ್ಲಿ 228 ಮತಗಟ್ಟೆಗಳಿದ್ದು, 1,03,861 ಪುರುಷರು, 99,847 ಮಹಿಳೆಯರು, 6 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 2,03,714 ಮತದಾರರಿದ್ದಾರೆ.

ಒಟ್ಟಾರೆಯಾಗಿ ಏಳು ವಿಧಾನಸಭಾ ಮತಕ್ಷೇತ್ರದಲ್ಲಿ 1,665 ಮತಗಟ್ಟೆಗಳಿದ್ದು, 8,06,478 ಪುರಷರು, 8,17,358 ಮಹಿಳೆಯರು, 97 ಜನ ಲಿಂಗತ್ವ ಅಲ್ಪಸಂಖ್ಯಾತರು ಸೇರಿ ಒಟ್ಟು 16,23,933 ಮತದಾರರಿದ್ದಾರೆ.

2002ರ ಮತದಾರರ ಪಟ್ಟಿಗೆ ತಾಳೆ ಮಾಡುವ (ಒಚಿಠಿಠಿಟಿರ, ಚಿಟಿಜ ಕಡಿಂರಜಟಿಥಿ) ಕಾರ್ಯದ ವಿವರ: ಸೆಪ್ಟೆಂಬರ್ 12, 2025 ರಿಂದ ಮೇ 19, 2026 ರವರೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಪೂರ್ವ ಸಿದ್ಧತೆಗಳ ಅಂಗವಾಗಿ 2025ರ ಮತದಾರರ ಯಾದಿಯಲ್ಲಿ ನೋಂದಣಿಯಾದ ಮತದಾರರನ್ನು 2002ರ ಮತದಾರರ ಪಟ್ಟಿಗೆ ತಾಳೆ ಮಾಡುವ (ಒಚಿಠಿಠಿಟಿರ, ಚಿಟಿಜ ಕಡಿಂರಜಟಿಥಿ) ಕಾರ್ಯವನ್ನು ಕೈಗೊಳ್ಳಲಾಗಿದ್ದು, ಮೇ 19, 2026 ವರೆಗೆ ಶೇ. 89.94 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಳಿಸಿದ್ದು, ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತಗಟ್ಟೆ ಅಧಿಕಾರಿಗಳ ವಿವರ: ಜಿಲ್ಲೆಯಲ್ಲಿ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,665 ಮತಗಟ್ಟೆಗಳಿದ್ದು, ಪ್ರತಿ ಮತಗಟ್ಟೆಗೆ ಒಬ್ಬರಂತೆ ಮತಗಟ್ಟೆ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಮತ್ತು 230 ಬಿಎಲ್ಓ ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎಡಿಸಿ ಗೀತಾ ಸಿ.ಡಿ. ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ವಿಭಾಗದ ತಹಶೀಲ್ದಾರ ಸೇರಿದಂತೆ ಸಿಬ್ಬಂದಿಗಳು ಇದ್ದರು.

# ಲಕ್ಕುಂಡಿ ವೈಭವ: ಸ್ಯಾಟಲೈಟ್ ಇಮೇಜಿಂಗ್ ಮೂಲಕ 101 ಬಾವಿ, ದೇವಾಲಯಗಳ ಪತ್ತೆಗೆ ಮಾಸ್ಟರ್ ಪ್ಲಾನ್!



**ಬೆಳಗಾವಿ ವಾರ್ತೆ ಗದಗ:** ಐತಿಹಾಸಿಕ ಲಕ್ಕುಂಡಿಯಲ್ಲಿರುವ ಬಾವಿ ನೂರೊಂದು ದೇವಾಲಯಗಳನ್ನು ಶೀಘ್ರದಲ್ಲಿಯೇ ಸ್ಯಾಟಲೈಟ್ ಇಮೇಜಿಂಗ್ ಟೆಕ್ನಾಲಜಿಯ ಮೂಲಕ ನ್ಯಾಸ್ ಸಂಸ್ಥೆ (ರಾಷ್ಟ್ರೀಯ ಉನ್ನತ ಅಧ್ಯಯನ ಸಂಸ್ಥೆ) ಸಹಕಾರದೊಂದಿಗೆ ಪತ್ತೆ ಹಚ್ಚಿ ದೇಶಕ್ಕೆ ಅನಾವರಣಗೊಳಿಸಲಾಗುವುದು ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ವಿಧಾನ ಸೌಧದಲ್ಲಿ ಬುಧವಾರ ಲಕ್ಕುಂಡಿ ಯಲ್ಲಿರುವ ನೂರೊಂದು ಬಾವಿ ನೂರೊ ಂದು ದೇವಾಲಯಗಳನ್ನು ಹೊರತರುವ ಸಲುವಾಗಿ ನ್ಯಾಸ್ ಸಂಸ್ಥೆ ವಿಜ್ಞಾನಿಗ ಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡುತ್ತಾ ಈಗಾಗಲೇ 2023ರಿಂದ ಲಕ್ಕುಂಡಿಯಲ್ಲಿ 32 ದೇವಾಲಯಗಳು, 28 ಬಾವಿಗಳು ಹಾಗೂ 7 ಇತರೆ ಸ್ಮಾರಕಗಳನ್ನು ಒಳಗೊಂಡಂತೆ ಒಟ್ಟು 70ಕ್ಕೂ ಹೆಚ್ಚು ಸ್ಮಾರಕಗಳನ್ನು ಗುರುತಿ ಸಲಾಗಿದೆ. ಮುಂಬರುವ ಡಿಸೆಂಬರ್ 31ರೊಳಗೆ ಲಕ್ಕುಂಡಿಯಲ್ಲಿ 101 ಬಾವಿ 101 ದೇವಾಲಯಗಳನ್ನು ನ್ಯಾಸ್ ಸಂಸ್ಥೆ ಹಾಗೂ ಸ್ಥಳೀಯರ ಸಹಭಾಗಿತ್ವದೊಂದಿಗೆ ಅನಾವರಣ ಗೊಳಿ ಸಲು ಅಗತ್ಯ ಎಲ್ಲಾ ಪ್ರಯತ್ನಗಳನ್ನು ಮಾಡಲಾಗುವುದು ಎಂದರು.

ಲಕ್ಕುಂಡಿಯನ್ನು ವಿಶ್ವಪಾರಂಪರಿಕ ತಾಣಗಳ ಪಟ್ಟಿಗೆ (ಯುನೆಸ್ಕೋ) ಸೇರಿಸಲು ಪ್ರಸ್ತಾವನೆ ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿದ್ದು, ಯುನೆಸ್ಕೋ ಪಟ್ಟಿಗೆ ಸೇರಿಸಲು 2024ರ ನವಂಬರ್‌ನಲ್ಲಿ ಪ್ರಾಚ್ಯಾವಶೇಷಗಳ ಆನ್ವೇಷಣೆ ಭಾಗ-1ನ್ನು ನಡೆಸಿ 1500ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳನ್ನು ಅನ್ವೇಷಿಸಲಾಗಿದೆ. 2026ರ ಮೇ 2ರಿಂದ ಪ್ರಾಚ್ಯಾವಶೇಷಗಳ ಅನ್ವೇಷಣೆ ಭಾಗ-2 ನಡೆಸುತ್ತಿದ್ದು, ಈಗಾಗಲೇ ಎರಡನೇ ಹಂತದಲ್ಲಿ 3800ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳು ದೊರೆತಿವೆ. ಎರಡೂ ಹಂತಗಳ ಪ್ರಾಚ್ಯಾವಶೇಷಗಳನ್ನು ಸೇರಿಸಿ ಜೂನ್ 30ರ ಒಳಗಾಗಿ ದಾಖಲೆಯ ರೀತಿಯ 5000ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳನ್ನು ಅನ್ವೇಷಿಸಿ ಅವುಗಳನ್ನು ಬಯಲು ವಸ್ತು ಸಂಗ್ರಹಾಲಯದಲ್ಲಿ ಪ್ರದರ್ಶಿಸಲಾಗುವುದು ಎಂದರು.

ಲಕ್ಕುಂಡಿಯಲ್ಲಿರುವ ದೇವಸ್ಥಾನಗಳಿಗೆ ಹೊಸ ರೂಪ ನೀಡಲು ಫೆಬ್ರವರಿಯಲ್ಲಿ ಪಂಚ ದೇವಾಲಯ ಮತ್ತು ಪಂಚ ಬಾವಿಗಳ ಅನಾವರಣ ಕೈಗೊಂಡಿದ್ದು, ಮೇ 2ರಿಂದ ದಶ ಬಾವಿ ದಶ ದೇವಾಲಯಗಳ ಅನಾವರಣ ಕಾರ್ಯವೂ ಸಹ ನಡೆಯುತ್ತಿದೆ. 10 ಕೋಟಿ ರೂ. ವೆಚ್ಚದಲ್ಲಿ 6 ಸ್ಮಾರಕಗಳನ್ನು ಸಂರಕ್ಷಿಸಿ ಅಭಿವೃದ್ಧಿಗೊಳಿಸಲಾಗುವುದು. 2026-27ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ 10ಕ್ಕಿಂತ ಹೆಚ್ಚು ಸ್ಮಾರಕಗಳನ್ನು ಸಂರಕ್ಷಣೆ ಮಾಡಿ ಅಭಿವೃದ್ಧಿಗೊಳಿಸಲಾಗುವುದು. ಒಟ್ಟಾರೆಯಾಗಿ ಲಕ್ಕುಂಡಿಯನ್ನು ವಿಶ್ವಮಟ್ಟದಲ್ಲಿ ಗುರುತಿಸುವ ಕಾರ್ಯಕ್ಕೆ ಹಾಗೂ ಯುನೆಸ್ಕೋ ಪಟ್ಟಿಗೆ ಸೇರಿಸಲು ಮತ್ತಷ್ಟು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಇಸ್ರೋ ಮಾಜಿ ಅಧ್ಯಕ್ಷ ಡಾ. ಕಿರಣ ಕುಮಾರ್ ಮಾತನಾಡಿ, ಲಕ್ಕುಂಡಿ ವಿಶ್ವ ಪಾರಂಪರಿಕ ತಾಣಗಳ ಪಟ್ಟಿಗೆ ಸೇರ್ಪಡೆಯಾಗುವುದು ಅಗತ್ಯವಾಗಿದೆ. ಸ್ಯಾಟಲೈಟ್ ತಂತ್ರಜ್ಞಾನ ಬಳಸಿ ಲಕ್ಕುಂಡಿಯಲ್ಲಿರುವ 101 ಭಾವಿ ಹಾಗೂ 101 ದೇವಾಲಯಗಳನ್ನು ಅನಾವರಣಗೊಳಿಸುವ ಪ್ರಯತ್ನಕ್ಕೆ ಕೈಜೋಡಿಸಲಾಗುವುದು ಎಂದು. ತಿಳಿಸಿದರು. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿ ಸದಸ್ಯ ಸಿದ್ದಲಿಂಗೇಶ್ವರ ಪಾಟೀಲ್, ಪ್ರಾಧಿಕಾರದ ಆಯುಕ್ತ ಡಾ.ಶರಣು ಗೋಗೇರಿ ಮಾತನಾಡಿದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ಕೆ.ವಿ.ತ್ರಿಲೋಕಚಂದ್ರ ಆಯುಕ್ತ ಅಕ್ರಂ ಪಾಷಾ, ಇಸ್ರೋ ವಿಜ್ಞಾನಿ ಪ್ರೊ. ರಾಮನಗೌಡ ನಾಡಗೌಡರ ಪಾಲ್ಗೊಂಡಿದ್ದರು.

# ಪ್ರತ್ಯೇಕ ಪಾಲಿಕೆಗೆ ಅನುಮೋದನೆ ನೀಡಿ: ರಾಜ್ಯಪಾಲರಿಗೆ ಲಾಡ್ ಮನವಿ

**ಬೆಳಗಾವಿ ವಾರ್ತೆ ಧಾರವಾಡ:** ಹು-ಧಾ ಮಹಾನಗರ ಪಾಲಿಕೆ ವಿಭಜಿಸಿ ಧಾರವಾಡಕ್ಕೆ ಪ್ರತ್ಯೇಕ ಪಾಲಿಕೆ ರಚನೆ ಪ್ರಸ್ತಾವಕ್ಕೆ ಅನುಮೋದನೆ ನೀಡಬೇಕು ಎಂದು ರಾಜ್ಯಪಾಲರಿಗೆ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಮನವಿ ಮಾಡಿದರು.

ಧಾರವಾಡ ಶಾಸಕರು ಮತ್ತು ಪ್ರತ್ಯೇಕ ಮಹಾನಗರ ಪಾಲಿಕೆ ಹೋರಾಟಗಾರರ ನಿಯೋಗದೊಂದಿಗೆ ಬುಧವಾರ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಲೋಕಭವನದಲ್ಲಿ ಭೇಟಿ ಮಾಡಿ ಮಾತನಾಡಿ, ಪ್ರತ್ಯೇಕ ಮಹಾನಗರ ಪಾಲಿಕೆ ಧಾರವಾಡದ ಜನತೆಯ ಬಹುದಿನಗಳ ಬೇಡಿಕೆಯಾಗಿದೆ. ಈಗಾಗಲೇ ಅಲ್ಲಿಯ ಜನರು ಪ್ರತಿಭಟನೆಗೆ ಮುಂದಾಗಿದ್ದು, ದಿನದಿಂದ ದಿನಕ್ಕೆ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಅದಕ್ಕಾಗಿ ಜನರ ಭಾವನೆಗಳಿಗೆ ಸ್ಪಂದಿಸಿ ಶೀಘ್ರವೇ ಅನು ಮೋದನೆ ನೀಡಬೇಕು ಎಂದು ಮನವಿ ಮಾಡಿದರು.

ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮಾತನಾಡಿ, ಕಳೆದ ಐದು ತಿಂಗಳ ಹಿಂದಷ್ಟೇ ನನ್ನ ಬಳಿ ಕಡತ ಬಂದಿದೆ. ಅಲ್ಲದೇ ಇನ್ನೂ ಪಾಲಿಕೆ ಸದಸ್ಯರ ಅವಧಿ ಪೂರ್ಣಗೊಳ್ಳದೇ ಪ್ರತ್ಯೇಕ ಪಾಲಿಕೆ ಮಾಡಿದರೆ ಅವರ ಅಧಿಕಾರ ಮೊಟಕು ಗೊಳಿಸಿದಂತಾಗುತ್ತದೆ ಎಂಬ ಕಾರಣದಿಂದ ಸಹಿ ಹಾಕಿದ್ದಿಲ್ಲ. ಈಗ ಕಾನೂನು ವಿಭಾಗದ ಸಲಹೆ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು ಎನ್ನಲಾಗಿದೆ. ಆದರೆ, ಇದಕ್ಕೆ ವಿರೋಧ ವ್ಯಕ್ತಪಡಿಸಿದ ಹೋರಾಟಗಾರರು, ಸರಕಾರದಿಂದ ಆದೇಶ ವಾಗಿ ತಮ್ಮ ಬಳಿ 2025ರ ಏ. 28ರಂದು ಕಡತ ಬಂದಿದೆ. ಆದರೆ, ಇಲ್ಲಿಯ ವರೆಗೆ ಸಹಿಯಾಗದೇ ಹಾಗೆಯೇ ಉಳಿದಿದೆ. ಜನರ ಭಾವನೆಗಳಿಗೆ ಸ್ಪಂದನೆ ನೀಡಿ ನಮಗೆ ಶೀಘ್ರವೇ ಅನುಮೋದನೆ ನೀಡಬೇಕು ಎಂದು ಮನವಿ ಮಾಡಿದರು ಎನ್ನಲಾಗಿದೆ.



# ಪಟ್ಟಣ ಪಂಚಾಯತಿಯಲ್ಲಿ ಮ್ಯೂಟೇಶನ್ ಶುಲ್ಕದ ಹೆಸರಿನಲ್ಲಿ ಮಾರುಕಟ್ಟೆ ಬೆಲೆಯ 2% ವಸೂಲಿ : ಹಿತರಕ್ಷಣಾ ಸಮಿತಿ ಆರೋಪ



**ಬೆಳಗಾವಿ ವಾರ್ತೆ ಕುಕನೂರು :** ಪಟ್ಟಣ ಪಂಚಾಯತಿಯಲ್ಲಿ ಹಕ್ಕು ಬದಲಾವಣೆ ಪ್ರಕ್ರಿಯೆಗೆ ಮಾರುಕಟ್ಟೆ ಮೌಲ್ಯದ ಶೇ.2% ಶುಲ್ಕ ವಿಧಿಸಲಾಗುತ್ತಿರುವ ಕುರಿತು ಸಾರ್ವಜನಿಕರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಈ ಹಿನ್ನಲೆಯಲ್ಲಿ ಮಂಗಳವಾರದಂದು ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿಯ ಸಹಸಂಚಾಲಕರಾದ ಮಂಜುನಾಥ ನಾಡಗೌಡರ ಅವರು ಪ. ಪಂ ಮುಖ್ಯಾಧಿಕಾರಿ ನಾಗೇಶ್ ಅವರಿಗೆ ಮನವಿ ಸಲ್ಲಿಸಿ ಸಂಪೂರ್ಣ ಮಾಹಿತಿ ಬಹಿರಂಗಪಡಿಸುವಂತೆ ಹಾಗೂ ಸಾರ್ವಜನಿಕರ ಮೇಲಿನ ಆರ್ಥಿಕ ಭಾರವನ್ನು ತಕ್ಷಣ ಕಡಿಮೆ ಮಾಡುವಂತೆ ಆಗ್ರಹಿಸಿದರು.

ಮನವಿಯಲ್ಲಿ 1964ರ ಕರ್ನಾಟಕ ಪೌರಸಭೆಗಳ ಅಧಿನಿಯಮ ಮತ್ತು ಸಂಬಂಧಿತ ನಿಯಮಾವಳಿಗಳ ಪ್ರಕಾರ ಇಂತಹ 2% ಶುಲ್ಕ ವಿಧಿಸಲು ಸ್ಪಷ್ಟವಾದ ಕಾನೂನು ಆಧಾರವಿದೆಯೇ ಎಂಬ ಪ್ರಶ್ನೆಯನ್ನು ಎತ್ತಲಾಗಿದೆ.

ಜಿಲ್ಲೆಯ ಇತರೆ ಸ್ಥಳೀಯ ಸಂಸ್ಥೆಗಳಲ್ಲಿ ಅತಿ ಕಡಿಮೆ ಶುಲ್ಕ ವಸೂಲಿ ಮಾಡಲಾಗುತ್ತಿದ್ದು, ಕುಕನೂರಿನಲ್ಲಿ ಮಾತ್ರ ಮಾರುಕಟ್ಟೆ ಮೌಲ್ಯದ ಆಧಾರದ ಮೇಲೆ ಸಾವಿರಾರು ರೂಪಾಯಿ ಸಂಗ್ರಹಿಸಲಾಗುತ್ತಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ತಮ್ಮ ಆಸ್ತಿ ಹಕ್ಕು ಬದಲಾವಣೆ ಮಾಡಲು ಅನಗತ್ಯ ಆರ್ಥಿಕ ಸಂಕಷ್ಟ ಅನುಭವಿಸುತ್ತಿವೆ ಎಂದು ಮಂಜುನಾಥ ನಾಡಗೌಡರ ಆರೋಪಿಸಿದರು.

ಪಟ್ಟಣ ಪಂಚಾಯತಿ ಸಾರ್ವಜನಿಕರ ತೆರಿಗೆ ಹಣದಿಂದ ನಡೆಯುವ ಸಂಸ್ಥೆಯಾಗಿದ್ದು, ಯಾವುದೇ ತೆರಿಗೆ ಅಥವಾ ಶುಲ್ಕ ವಿಧಿಸುವ ಮೊದಲು ಸರ್ಕಾರದ ಆದೇಶ, ಬೈಲಾ ಹಾಗೂ ಸಾಮಾನ್ಯ ಸಭೆಯ ಅನುಮೋದನೆ ಕಡ್ಡಾಯವಾಗಿದೆ.

ಆದ್ದರಿಂದ ಈ 2% ಶುಲ್ಕ ವಸೂಲಿಗೆ ಸಂಬಂಧಿಸಿದ ಸರ್ಕಾರದ ಆದೇಶ, ಸಾಮಾನ್ಯ ಸಭೆಯ ನಿರ್ಣಯ, ಬೈಲಾ ಮತ್ತು ಲೆಕ್ಕಪತ್ರಗಳ ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಈ ಕುರಿತು ಪ್ರತಿಕ್ರಿಯಿಸಿ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ನಾಗೇಶ್ ಅವರು ಮಾತನಾಡಿ ಸಾರ್ವಜನಿಕರ ಮನವಿಯನ್ನು ಗಂಭೀರವಾಗಿ ಪರಿಗಣಿಸಲಾಗಿ ವಿಷಯವನ್ನು ನಾಳೆ ನಡೆಯಲಿರುವ ಸಾಮಾನ್ಯ ಸಭೆಯಲ್ಲಿ ಚರ್ಚೆಗೆ ತೆಗೆದುಕೊಂಡು, ಕಾನೂನುಬದ್ಧವಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಮಿತಿಯ ಸಂಚಾಲಕರಾದ ರವಿ ಜಕ್ಕ, ಸದಸ್ಯರಾದ ಬಸಪ್ಪ ಲಾಲಗೊಂಡರ್, ಬಸವಣ್ಣ ಈಬೇರಿ, ರಾಮನಗೌಡ ಅರಿಶಿನಬಿಡಿ, ಶರಣಪ್ಪ ಚೆಂಡೂರು, ವೀರೇಶ ಸಬರದ, ಮಾಂತೇಶ ಹೂಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಿಂಕೆಯನ್ನು ಅರಣ್ಯ ಇಲಾಖೆಗೆ ಒಪ್ಪಿಸಿದ ರೈತರು

## ಎರಡು-ಮೂರು ತಿಂಗಳು ಸಾಕಿ ಸಂರಕ್ಷಿಸಿ ಬಳಿಕ ಕಮಲಾಪುರ ಮೃಗಾಲಯಕ್ಕೆ ಹಸ್ತಾಂತರಕ್ಕೆ ಕ್ರಮ

**ಬೆಳಗಾವಿ ವಾರ್ತೆ ಕೊಪ್ಪಳ:** ತಾಲೂಕಿನ ಅಳವಂಡಿ ಹೋಬಳಿಯ ಶರಣಯ್ಯ ಮೃತ್ಯುಂಜಯ ಹಿರೇಮಠ ಹಾಗೂ ಶಿವಪುತ್ರಯ್ಯ ಹಿರೇಮಠ ಅವರ ಜಮೀನಿನಲ್ಲಿ ಸಿಕ್ಕಿದ್ದ ಜಿಂಕೆಯನ್ನು ಮಾನವೀಯತೆ ತೋರಿಸಿ ಸುಮಾರು ಎರಡು-ಮೂರು ತಿಂಗಳ ಕಾಲ ಸಾಕಿ ಸಂರಕ್ಷಣೆ ಮಾಡಲಾಗಿತ್ತು. ಬಳಿಕ ಅದನ್ನು ಅರಣ್ಯ ಪ್ರದೇಶದಲ್ಲಿರುವ ಜಿಂಕೆಗಳ ಹಿಂಡಿಗೆ ಸೇರಿಸಲು ಪ್ರಯತ್ನಿಸಿದರೂ ಅದು ಅಲ್ಲೇ ಉಳಿಯದೇ ಮತ್ತೆ ಊರಿನತ್ತ ಮರಳುತ್ತಿತ್ತು ಎನ್ನಲಾಗಿದೆ.

ಜಿಂಕೆ ಸುತ್ತಮುತ್ತಲಿನ ಹಳ್ಳಿಗಳಲ್ಲೂ ಸಂಚರಿಸುತ್ತಿದ್ದು, ಗ್ರಾಮಸ್ಥರು ಶರಣಯ್ಯ ಹಿರೇಮಠ ಅವರಿಗೆ ಕರೆ ಮಾಡಿ "ನಿಮ್ಮ ಜಿಂಕೆ ಇಲ್ಲಿ ಬಂದಿದೆ, ಕರೆದುಕೊಂಡು ಹೋಗಿ" ಎಂದು ಮಾಹಿತಿ ನೀಡುತ್ತಿದ್ದರು. ಇದರಿಂದ ಜಿಂಕೆಯನ್ನು ಸುರಕ್ಷಿತವಾಗಿ ನೋಡಿಕೊಳ್ಳುವುದು ಕಷ್ಟಕರವಾಗಿತ್ತು.

ಈ ಹಿನ್ನೆಲೆ ಜಿಂಕೆ ಅರಣ್ಯ ಇಲಾಖೆಗೆ ಸಂಬಂಧಪಟ್ಟ ಪ್ರಾಣಿ ಆಗಿರುವುದರಿಂದ ಶರಣಯ್ಯ ಹಿರೇಮಠ ಹಾಗೂ ಶಿವಪುತ್ರಯ್ಯ ಹಿರೇಮಠ ಅವರು ಅದನ್ನು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಒಪ್ಪಿಸಿದರು. ಅರಣ್ಯ ಅಧಿಕಾರಿ ಎ.ಹೆಚ್. ಮುಲ್ಲಾ ಹಾಗೂ ಸಿಬ್ಬಂದಿ ವರ್ಗ ಜಿಂಕೆಯನ್ನು ತಮ್ಮ ವಶಕ್ಕೆ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅರಣ್ಯ ಅಧಿಕಾರಿ ಎ.ಹೆಚ್. ಮುಲ್ಲಾ ಅವರು, "ಜಿಂಕೆಯನ್ನು ಮುಂದಿನ ದಿನಗಳಲ್ಲಿ ಕಮಲಾಪುರ ಮೃಗಾಲಯಕ್ಕೆ ಹಸ್ತಾಂತರ ಮಾಡುವ ಕ್ರಮ ಕೈಗೊಳ್ಳಲಾಗುವುದು" ಎಂದು ತಿಳಿಸಿದರು.



ಗ್ರಾಮೀಣ ಪ್ರದೇಶದಲ್ಲಿ ಕಾಡುಪ್ರಾಣಿಯನ್ನು ಸಂರಕ್ಷಿಸಿ ಬಳಿಕ ಅರಣ್ಯ ಇಲಾಖೆಗೆ ಒಪ್ಪಿಸಿದ ರೈತರ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದೆ.

# ವಿಚಾರ ಸಂಕಿರಣ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಪಟ್ಟಣದಲ್ಲಿ ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ನಿಕಟ ಪೂರ್ವ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮನು ಬಳಿಗಾರ ಅವರು ಸಸಿಗೆ ನೀರರೆಯುವ ಮೂಲಕ ಉದ್ಘಾಟಿಸಿದರು. ಬಳಿಕ ಅವರು ಮಾತನಾಡಿ ಸಾವಿರಾರು ವರ್ಷಗಳ ಹಿಂದೆಯೇ ಪುಲಿಗೆರೆ 300 ರಾಜ್ಯಧಾನಿಯಾಗಿತ್ತು. ಆರು ಏಳನೆಯ ಶತಮಾನದಲ್ಲಿ ಸಾಹಿತಿಕವಾಗಿ ಅತ್ಯಂತ ಪ್ರಬುದ್ಧವಾಗಿ ಈ ನಾಡು ಬೆಳೆದಿತ್ತು ಸಾಹಿತ್ಯ ಮತ್ತು ಸಂಶೋಧನಾ ಕೇಂದ್ರವಾಗಿತ್ತು ಎಂದು ಇತಿಹಾಸ ಹೇಳುತ್ತಿದೆ.

ಕನ್ನಡ ಸಾರಸತ್ವ ಲೋಕಕ್ಕೆ ತಿರುಳುಗನ್ನಡ ಭಾಷೆಯನ್ನು ನೀಡಿದ ಹೆಮ್ಮೆ ಈ ನಾಡಿಗೆ ಇದೆ. ಪುಲಿಗೆರೆ ಸಾವಿರಾರು ವರ್ಷಗಳ ಹಿಂದೆ ಸಾಹಿತ್ಯ ಸಂಗೀತ ನಾಟಕ ಶಿಲ್ಪಕಲೆ ವಚನಕಾರರು ಶರಣರು ಆಗಿ ಹೋಗಿದ್ದಾರೆ ಪಂಪನ ರಚಿಸಿದ ಕಾವ್ಯದಲ್ಲಿ ಸ್ಪೂರ್ತಿ ರಾಷ್ಟ್ರ ಪ್ರೇಮ ಸೌಹಾರ್ದತೆ ಸಮಾನತೆ ಎದ್ದು ಕಾಣುತ್ತಿದೆ ಅವರು ರಚಿಸಿದ ಕವಿರಾಜಮಾರ್ಗದಲ್ಲಿ ಇಂದಿನ ಸಂಘರ್ಷ ಮುಂತಾದವುಗಳಿಗೆ ದಾರಿದೀಪವಾಗಿದೆ ಈ ನಾಡಿನಲ್ಲಿ ಇದುವರೆಗೆ ದೊರೆತಿರುವ ಮಾಹಿತಿಗಳ ಪ್ರಕಾರ ಬಸದಿಗಳು ದೇವಾಲಯಗಳು ಶಿಲಾ ಶಾಸನಗಳು ಸಾಹಿತ್ಯದ ಕಂಪನ್ನು ಬೀರುತ್ತಿವೆ.

ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಪುಲಿಗೆರೆಯ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯವನ್ನು ಉಳಿಸಿ ಬೆಳೆಸುವಲ್ಲಿ ಕೈಗೊಂಡಿರುವ ಕಾರ್ಯ ಪ್ರಶಂಸನೀಯ ಎಂದರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದ ಗೌಡ ಪಾಟೀಲ್ ವಹಿಸಿದ್ದರು ವೇದಿಕೆ ಮೇಲೆ ಪ್ರೊಫೆಸರ್ ಎನ್ಎಫ್ ಶಿಗ್ಲಿ ಆರ್ ಬಿ ಬನ್ನೂರ್ ಆರ್ ಎನ್ ಪಾಟೀಲ್ ಇದ್ದರು.

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕರಾದ ಪ್ರೊಫೆಸರ್ ಎನ್ಎಂ ತಳವಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಈಶ್ವರ್ ಮೆಡ್ಲೇರಿ ಸ್ವಾಗತಿಸಿ ಡಾ. ಎನ್ ಎಸ್ ಅನ್ನಪೂರ್ಣ ಡಾ. ಪವಿತ್ರ ಬಿ ಬಸವರಾಜ ಬಾಳೇಶ್ವರ ಮಠ ನಿರ್ವಹಿಸಿದರು. ನಂತರ ಪುಲಿಗೆರೆಯ ಶಾಸನಗಳು ಕುರಿತು ಡಾ. ಹನುಮಾಕ್ಷಿ ಗೋಗಿ ಪುಲಿಗೆರೆಯ ಸೋಮ ಮತ್ತು ಆದಾಯ ಕುರಿತು ಕನ್ನಡ ಹಂಪಿ ವಿವಿಯ ವಿಶ್ರಾಂತ ಕನ್ನಡ ಪ್ರಾಧ್ಯಾಪಕರಾದ ಡಾ. ಕೆ ರವೀಂದ್ರನಾಥ ಉಪನ್ಯಾಸ ನೀಡಿದರು.

# ಧಾರವಾಡ ನಗರದಲ್ಲಿನ ಬೀಡಿ ಕಾರ್ಮಿಕರ ಕಲ್ಯಾಣ ನಿಧಿ ಆಸ್ಪತ್ರೆ ಜೂ. 1 ರಿಂದ ಬಂದ್

ಧಾರವಾಡ: ಕೇಂದ್ರ ಸರ್ಕಾರದ ಕಾರ್ಮಿಕ ಹಾಗೂ ಉದ್ಯೋಗ ಸಚಿವಾಲಯದ ನಿರ್ದೇಶನದಂತೆ ಧಾರವಾಡ ನಗರದಲ್ಲಿರುವ ಬೀಡಿ ಕಾರ್ಮಿಕರ ಕಲ್ಯಾಣ ನಿಧಿ ಆಸ್ಪತ್ರೆಯನ್ನು ಜೂನ್ 1, 2026 ರಿಂದ ಶಾಶ್ವತವಾಗಿ ಮುಚ್ಚಲಾಗುತ್ತದೆ.

ಫಲಾನುಭವಿಗಳು ಹುಬ್ಬಳ್ಳಿ ನಗರದಲ್ಲಿರುವ ಆರ್.ಎಮ್.ಚಾಟನಿಸ್ ಬಿಲ್ಡಿಂಗ್, ಪಿಬಿ ರೋಡ ಹತ್ತಿರದ ಬೀಡಿ ಕಾರ್ಮಿಕರ ಕಲ್ಯಾಣ ನಿಧಿ ಸ್ಥಿರ ಉಪಚಿಕಿತ್ಸಾಲಯ (BWWFDD dispensar,y R.M.Chatnis buliding PB Road, Hubballi) ಆಸ್ಪತ್ರೆಯಲ್ಲಿ ಆರೋಗ್ಯ ಸೇವೆಗಳು ಲಭ್ಯವಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಆಸ್ಪತ್ರೆಯ ವೈದ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ : ನಾಗಭೂಷಣ್ ಸಾಲಿಮಠ

**ಬೆಳಗಾವಿ ವಾರ್ತೆ ಕೊಪ್ಪಳ :** 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತಿಯ ಪಿಯುಸಿ ಪರೀಕ್ಷೆಯಲ್ಲಿ ಶೇಕಡಾ 90% ಹಾಗೂ 90% ಕ್ಕಿಂತ ಹೆಚ್ಚು ಅಂಕಗಳು ಪಡೆದಿರುವ ವಿಧ್ಯಾರ್ಥಿ/ವಿಧ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಅರ್ಜಿ ಅಹ್ವಾನಿಸಲಾಗಿದೆ.

ಇದೇ ತಿಂಗಳು 25ನೇ ದಿನಾಂಕ ಕೊನೆ ದಿನವಾಗಿರುತ್ತದೆ ವಿಧ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಲು ಮಹಾಸಭೆಯ www.aivlm.org ವೆಬ್ಸೈಟ್‌ನಲ್ಲಿ ಆನ್ಲೈನ್ ಅರ್ಜಿಗಳು ಸಲ್ಲಿಸಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕೊಪ್ಪಳ ತಾಲೂಕಾ ಅಧ್ಯಕ್ಷ ನಾಗಭೂಷಣ್ ಸಾಲಿಮಠ ತಿಳಿಸಿದ್ದಾರೆ.

ಅಖೀಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾದ ಈಶ್ವರ ಖಂಡ್ರೆಯವರ ಆದೇಶ ಮೇರೆಗೆ ಪ್ರತಿಭಾ ಪುರಸ್ಕಾರ ಅರ್ಜಿ ಅಹ್ವಾನಿಸಲಾಗಿದೆ,

ಅರ್ಜಿಗಳು ಅಂಚೆ ಕಛೇರಿಯಾಗಲಿ ಕೋರಿಯರ್ ಮೂಲಕವಾಗಲಿ ಅಥವಾ ಖುದ್ದಾಗಿ ಬಂದು ಅರ್ಜಿ ಸಲ್ಲಿಸಿದರೂ ಸ್ವೀಕಾರ ಮಾಡುವುದಿಲ್ಲ ಆನ್ಲೈನ್ ಮೂಲಕ ಬಂದ ಅರ್ಜಿಗಳು ಸ್ವೀಕರಿಸಲಾಗುವುದು. ಹಾಗಾಗಿ ಹೆಚ್ಚಿನ ವಿಧ್ಯಾರ್ಥಿ/ವಿಧ್ಯಾರ್ಥಿನಿಯರು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿ ಸದುಪಯೋಗ ಪಡೆದುಕೋಳ್ಳಬೇಕು.



ಮೇ 25 ರ ನಂತರ ಬಂದ ಅರ್ಜಿಗಳು ತೆಗೆದುಕೊಳ್ಳುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶುದ್ದ ಕುಡಿಯುವ ನೀರು ಬಳಕೆಗೆ ಸಲಹೆ

ಬಾಗಲಕೋಟೆ: ಮಳೆಗಾಲ ಪ್ರಾರಂಭಗೊಳ್ಳುತ್ತಿರುವದರಿಂದ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಮನೆ ಮನೆಗೆ ನೀರು ಸರಬರಾಜು ಮಾಡುತ್ತಿರುವ ಮೂಲಗಳನ್ನು ಪರಿಶೀಲಿಸಿ ಶುದ್ದ ಕುಡಿಯುವ ನೀರು ಸರಬರಾಜು ಮಾಡುವಂತೆ ಈಗಾಗಲೇ ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕರಿಗೆ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಿಗೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಸಂಗಪ್ಪ ಅವರು ಸೂಚನೆ ನೀಡಿದ್ದಾರೆ.

ಪ್ರಸ್ತುತ ಮಳೆಗಾಲ ಪ್ರಾರಂಭವಾಗಿರುವದರಿಂದ ಸಾರ್ವಜನಿಕರು ತಮ್ಮ ವಾಸಸ್ಥಳದ ಪಕ್ಕದಲ್ಲಿರುವ ಕೆರೆ, ಕಾಲುವೆ, ಹಳ್ಳಗಳಲ್ಲಿ ಲಭ್ಯವಿರುವ ನೀರು ಕಲುಷಿತಗೊಂಡಿರುವ ಸಾದ್ಯತೆ ಇರುವದರಿಂದ ಸದರಿ ನೀರನ್ನು ಕುಡಿಯಲು ಉಪಯೋಗಿಸದೇ ದಿನನಿತ್ಯದ ಬಳಕೆಗೆ ಮಾತ್ರ ಉಪಯೋಗಿಸುವಂತೆ ಹಾಗೂ ಕೃಷಿ ಕೆಲಸಕ್ಕೆ ಹೊಲ, ಗದ್ದೆಗಳಿಗೆ ಹೋದಂತಹ ಸಂದರ್ಭದಲ್ಲಿ ಲಭ್ಯವಿರುವ ನಿಂತ ನೀರನ್ನು ಕುಡಿಯದೇ ಶುದ್ದ ಹಾಗೂ ಪರಿಷ್ಕರಿಸಿದ ನೀರನ್ನು ಮಾತ್ರ ಬಳಸಲು ತಿಳಿಸಿದ್ದಾರೆ.

ನಿಂತ ಹಾಗೂ ಪರಿಷ್ಕರಿಸಿದ ನೀರನ್ನು ಕುಡಿದು ಸಾಂಕ್ರಾಮಿಕ ರೋಗಗಳಿಗೆ ಬಾಧಿತಗೊಳ್ಳುವ ಸಾಧ್ಯತೆಯಿದ್ದು, ಇದರಿಂದ ಆರೋಗ್ಯದಲ್ಲಿ ಏರುಪೇರಾಗುವ ಸಂಭವ ಹೆಚ್ಚಾಗಿರುತ್ತದೆ. ಕಾರಣ ಕುಡಿಯುವ ನೀರಿನ ಬಳಕೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರದೇ ಪ್ರತಿದಿನ ಶುದ್ದ ಕುಡಿಯುವ ನೀರನ್ನು ಬಳಸಿ ಸುರಕ್ಷತೆಯಿಂದ ಇರುವಂತೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಕ್ಷೇತ್ರದಲ್ಲಿ ಹೆಚ್ಚಿನ ಗಮನ ಶಿಕ್ಷಣಕ್ಕೆ: ಶಾಸಕ ಪಾಟೀಲ




**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಕ್ಷೇತ್ರದಲ್ಲಿರುವ ರಸ್ತೆಗಳನ್ನು ಡಾಂಬರೀಕರಿಸಿದರೆ ಅದು ನಾಲ್ಕು ವರ್ಷ ಬಾಳಿಕೆಯಾಗುತ್ತದೆ. ಆದರೆ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಮಕ್ಕಳ ಭವಿಷ್ಯದ ಜೀವನದುದ್ದಕ್ಕೂ ಶಾಶ್ವತವಾಗಿ ಉಳಿಯುತ್ತದೆ ಎಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು.

ಜಿಪಂ ಬೆಳಗಾವಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ/ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕ.ರಾ.ಪ್ರೌ.ಸ.ಶಿ. ಸಂಘ ಬೆಂಗಳೂರ, ತಾಲೂಕ ಘಟಕ ಚ. ಕಿತ್ತೂರು–ಬೈಲಹೊಂಗಲ ಇವರುಗಳ ಸಂಯುಕ್ತ ಆಶ್ರಯದಲ್ಲಿ ನೇಗಿನಹಾಳ ಗ್ರಾಮದ ಶಾಸಕರ ಸ್ವಗೃಹ ಅಂಗಳದಲ್ಲಿ ಕ್ಷೇತ್ರದ ಎಸ್‌ಎಸ್‌ಎಲ್‌ಸಿ 2026ರ 100ರಷ್ಟು ಫಲಿತಾಂಶ ಪಡೆದ ಪ್ರೌಢ ಶಾಲೆಗಳ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ಕಾರ್ಯಕ್ರಮದಲ್ಲಿ ಸಸಿಗೆ ನೀರುಣಿಸಿ ಅವರು ಮಾತನಾಡಿದರು.

ನಾನು ಶಾಸಕನಾಗಿ ಆಯ್ಕೆ ಆದಾಗ ನನ್ನದೊಂದು ಗುರಿಯಿತ್ತು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಅದು ಇಂದು ಈಡೇರಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ವೈ ತುಬಾಕದ ಅಥತಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕ ನುಡಿಯನ್ನಾಡಿದರು.

ಪ್ರಾಸ್ತಾವಿಕವಾಗಿ ತಹಶೀಲ್ದರ ಕಲ್ಲನಗೌಡ ಪಾಟೀಲ, ಕೆಪಿಸಿಸಿ ಸದಸ್ಯ ರೋಹಿನಿತಾಯಿ ಪಾಟೀಲ, ಡೈಟ್ ಪ್ರಾಚಾರ್ಯ ಅಶೋಕ ಸಿಂದಗಿ, ಪತ್ರಕರ್ತ ಈಶ್ವರ ಹುಟಿ, ಮಹಾಂತೇಶ ತಿಲಗರ್ ಮಾತನಾಡಿದರು. 100ಕ್ಕೆ 100ರಷ್ಟು ಅಂಕ ಪಡೆದ ವಿದ್ಯಾರ್ಥಿಗಳನ್ನು, ಅತಿಥಿಗಳನ್ನು ಸತ್ಕರಿಸಲಾಯಿತು.

ಸಭೆಯಲ್ಲಿ ಡಿಸಿಸಿ ಬ್ಯಾಂಕ ನಿರ್ದೇಶಕ ನಾನಾಸಾಹೇಬ ಪಾಟೀಲ, ಶಂಕರ ಹೊಳಿ, ಇಓ ನಿಂಗಪ್ಪ ಮಸಳಿ, ಗಾಯತ್ರಿ ಅಜ್ಜನವರ, ಪಪಂ ಅಧ್ಯಕ್ಷ ಜೈಸಿದ್ರಾಮ ಮಾರಿಹಾಳ, ಸಿ.ಬಿ. ಪಾಟೀಲ, ಸನೀಲ್ ಘೀವಾರಿ, ಅಶಪಾಕ್ ಹವಾಲ್ದಾರ, ಕೃಷ್ಣಾ ಬಾಳೆಕುಂದ್ರಿ, ಎಮ್.ಎಫ್.ಜಕಾತಿ, ಶಾಸಕರ ಆಪ್ತ ಸಹಾಯಕ, ಅನ್ವರ್, ಸಂಜೀವ ಜುನ್ನೂರು, ಮಲ್ಲಿಕಾರ್ಜುನ ಕದಂ, ಸ್ನೇಹಲ್ ಪೂಜೆರ, ನಿರೂಪಿಸಿದರು, ಹಣ್ಣಿಕೇರಿ ಜಗದೀಶಗೌಡ ಪಾಟೀಲ, ಸಂಗನಗೌಡ ಪಾಟೀಲ, ಸಲೀಂ ಕಾಶೀಮನವರ, ಮುಖ್ಯೋಪಾಧ್ಯಯ ಶ್ರೀಶೈಲ ಅಂಗಡಿ, ಸಿಪಿಐ ಶಿವಾನಂದ ಗುಡಗನಟ್ಟಿ, ಬೈಲಹೊಂಗಲ ಬಿಇಓ ಸರ್, ಬಿಇಓ, ಶಿಕ್ಷಣ ಇಲಾಖೆ ಸಿಬ್ಬಂದಿ ಇತರರಿದ್ದರು.

# ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು ಮತ್ತು ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲ ಮತದಾರರನ್ನು ಮ್ಯಾಪಿಂಗ್ ಕಾರ್ಯ ಮಾಡಲು ಮೇ 23 ಮತ್ತು ಮೇ 24 ರಂದು ಜಿಲ್ಲೆಯಲ್ಲಿ ವಿಶೇಷ ಅಭಿಯಾನ ಆಯೋಜನೆ : ಜಿಲ್ಲಾಧಿಕಾರಿ ಸ್ನೇಹಲ್ ಆರ್

**ಬೆಳಗಾವಿ ವಾರ್ತೆ ಧಾರವಾಡ:** ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಜಿಲ್ಲೆಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಜರುಗಿಸುವ ಕುರಿತು ಪೂರ್ವ ಸಿದ್ಧತೆಗಳ ಅಂಗವಾಗಿ 2025ರ ಮತದಾರರ ಯಾದಿಯಲ್ಲಿ ನೋಂದಣಿಯಾದ ಮತದಾರರನ್ನು 2002ರ ಮತದಾರರ ಪಟ್ಟಿಗೆ ತಾಳೆ ಮಾಡುವ (Mapping and Progeny) ಕಾರ್ಯವನ್ನು ಕೈಗೊಳ್ಳಲಾಗಿರುತಿದೆ ಎಂದು ಜಿಲ್ಲಾ ಚುನಾವಣಾಧಿಗಳು ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2025ನೇ ಸಾಲಿನ ಮತದಾರರ ಪಟ್ಟಿಯಲ್ಲಿ 40 ಹಾಗೂ 40 ವರ್ಷಕ್ಕಿಂತ ಅಧಿಕ ವಯಸ್ಸಿನ ಮತದಾರರನ್ನು ಹಾಗೂ ಅವರ ಕುಟುಂಬ ಸದಸ್ಯರನ್ನು (ಉದಾ: ಮಗ, ಮಗಳು ಹಾಗೂ ಮೊಮ್ಮಕ್ಕಳು) 2002ರ ಮತದಾರರ ಪಟ್ಟಿಗೆ ಒಚಿಠಿ–ಡಿಟಿರ ಚಿಟಿಜ ಕಡಿಂರಜಟಿಥಿ ಮಾಡಿದಲ್ಲಿ, ಅಂತಹ ಮತದಾರರಿಂದ ಪೂರಕ ದಾಖಲೆಗಳನ್ನು ಸಂಗ್ರಹಿಸದೇ ನೇರವಾಗಿ ಹೊಸ ಮತದಾರರ ಪಟ್ಟಿಗೆ ಹೆಸರುಗಳನ್ನು ಸೇರ್ಪಡೆ ಮಾಡಬಹುದಾಗಿದೆ. ತಪ್ಪಿದಲ್ಲಿ, ಒಚಿಠಿಡಿಟಿರ ಚಿಟಿಜ ಕಡಿಂರಜಟಿಥಿ ಮಾಡದೇ ಇರುವ ಮತದಾರರು ವಿಶೇಷ ಸಮಗ್ರ ಪರಿಷ್ಕರಣೆಯ ಸಮಯದಲ್ಲಿ, ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಬೇಕೆಂದು ಅವರು ಹೇಳಿದ್ದಾರೆ.

ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲು ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. ಅದರಂತೆ 1) ಯಾವುದೇ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಪಿಎಸ್‌ಯುನ ನಿಯಮಿತ ಉದ್ಯೋಗಿ ಅಥವಾ ಪಿಂಚಣಿದಾರರಿಗೆ ನೀಡಲಾದ ಯಾವುದೇ ಗುರುತಿನ ಚೀಟಿ ಅಥವಾ ಪಿಂಚಣಿ ಪಾವತಿ ಆದೇಶ, 2) ಜುಲೈ 01, 1987 ಕ್ಕಿಂತ ಮೊದಲು ಭಾರತದಲ್ಲಿ ಸರ್ಕಾರ ಅಥವಾ ಸ್ಥಳೀಯ ಅಧಿಕಾರಿಗಳು ಅಥವಾ ಬ್ಯಾಂಕ್‌ಗಳು ಅಥವಾ ಅಂಚೆ ಕಚೇರಿ ಅಥವಾ ಎಲ್‌ಐಸಿ, ಪಿಎಸ್‌ಯುಗಳು ನೀಡಿದ ಯಾವುದೇ ಗುರುತಿನ ಚೀಟಿ ಅಥವಾ ಪ್ರಮಾಣ ಪತ್ರ ಅಥವಾ ದಾಖಲೆ, 3) ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಜನನ ಪ್ರಮಾಣ ಪತ್ರ 4) ಪಾಸ್ ಪೋರ್ಟ್., 5)ಮಾನ್ಯತೆ ಪಡೆದ ಮಂಡಳಿಗಳು ಅಥವಾ ವಿಶ್ವವಿದ್ಯಾಲಯಗಳು ನೀಡಿದ ಮೆಟ್ರಿಕ್ಯುಲೇಷನ್ ಅಥವಾ ಶೈಕ್ಷಣಿಕ ಪ್ರಮಾಣಪತ್ರ., 6)ಸಕ್ಷಮ ರಾಜ್ಯ ಪ್ರಾಧಿಕಾರದಿಂದ ನೀಡಲಾದ ಶಾಶ್ವತ ನಿವಾಸ ಪ್ರಮಾಣ ಪತ್ರ., 7)ಅರಣ್ಯ ಹಕ್ಕು ಪ್ರಮಾಣ ಪತ್ರ., 8)ಒಬಿಸಿ ಅಥವಾ ಎಸ್‌ಸಿ ಅಥವಾ ಎಸ್‌ಟಿ ಅಥವಾ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಯಾವುದೇ ಜಾತಿ ಪ್ರಮಾಣಪತ್ರ., 9)ರಾಷ್ಟ್ರೀಯ ನಾಗರಿಕರ ನೋಂದಣಿ (ಅದು ಎಲ್ಲೆಲ್ಲಿ ಅಸ್ತಿತ್ವದಲ್ಲಿದೆಯೋ ಅಲ್ಲಿ)., 10)ರಾಜ್ಯ ಅಥವಾ ಸ್ಥಳೀಯ ಅಧಿಕಾರಿಗಳು ಸಿದ್ಧಪಡಿಸಿದ ಕುಟುಂಬ ನೋಂದಣಿ., 11)ಸರ್ಕಾರದಿಂದ ಪಡೆದ ಯಾವುದೇ ಭೂಮಿ ಅಥವಾ ಮನೆ ಹಂಚಿಕೆ ಪ್ರಮಾಣಪತ್ರ., 12)ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಆಧಾರ್ ಅನ್ನು ಪೌರತ್ವದ ಪುರಾವೆಯಾಗಿ ಅಲ್ಲ, ಗುರುತಿನ ಪುರಾವೆಯಾಗಿ ಸ್ವೀಕರಿಸಲಾಗುವುದು. ಈ ಮುಂತಾದ ನಿಯಮಾವಳಿಗಳನ್ನು ಭಾರತ ಚುನಾವಣಾ ಆಯೋಗ ನೀಡಿದ್ದು ಇದರ ಅನ್ವಯ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಲು ಕ್ರಮ ವಹಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.



ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟಾರೆಯಾಗಿ ಮೇ 15, 2026 ರವರೆಗೆ ಮ್ಯಾಪಿಂಗ್ (Mapping) ಕಾರ್ಯದಲ್ಲಿ ಶೇಕಡಾ 66.99 ಮತ್ತು ಪ್ರೋಗೆನ್ನಿ (Progeny) ದಲ್ಲಿ ಶೇ. 116.27 ರಷ್ಟು ಮತ್ತು Mapping including Progeny ಕಾರ್ಯದಲ್ಲಿ ಶೇಕಡಾ 87.77 ರಷ್ಟು ಪ್ರಗತಿಯನ್ನು ಸಾಧಿಸಲಾಗಿದೆ. ಆದರೆ ಇನ್ನೂವರೆಗೂ Mapping ಮತ್ತು Progeny ಆಗದೇ ಬಾಕಿ ಇರುವ ಎಲ್ಲಾ ಮತದಾರರನ್ನು ಮ್ಯಾಪಿಂಗ್ ಕಾರ್ಯ ಮಾಡಲು 1 ನೇ ಹಂತದ ಮೇ 17 ಮತ್ತು ಮೇ 18, 2026 ರ ವರೆಗೆ ಹಾಗೂ 2ನೇ ಹಂತದ ಮೇ 23 ಮತ್ತು ಮೇ 24, 2026 ರ ವರೆಗೆ ವಿಶೇಷ ಅಭಿಯಾನಗಳನ್ನು ಆಯೋಜಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್.ಆರ್ ಅವರು ತಿಳಿಸಿರುತ್ತಾರೆ.

ಮೇ 17 ಮತ್ತು ಮೇ 18, 2026 ರ ವರೆಗೆ ಹಾಗೂ 2ನೇ ಹಂತದ ಮೇ 23 ಮತ್ತು ಮೇ 24, 2026 ರ ವರೆಗಿನ ದಿನಗಳಂದು ಬೆಳಿಗ್ಗೆ 8 ರಿಂದ ಸಂಜೆ 6 ರವರೆಗೆ ಜಿಲ್ಲೆಯ 71–ಧಾರವಾಡ, 72–ಹುಬ್ಬಳ್ಳಿ–ಧಾರವಾಡ ಪೂರ್ವ, 73–ಹುಬ್ಬಳ್ಳಿ–ಧಾರವಾಡ ಕೇಂದ್ರ ಮತ್ತು 74–ಹುಬ್ಬಳ್ಳಿ–ಧಾರವಾಡ ಪಶ್ಚಿಮ ವಿಧಾನಸಭಾ ಕ್ಷೇತ್ರಗಳ ಪೈಕಿ ಶೇ 80 ಕ್ಕಿಂತ ಕಡಿಮೆ ಪ್ರಗತಿ ಸಾಧಿಸಿದ ಪ್ರತಿಯೊಂದು ಮತಗಟ್ಟೆಗಳಲ್ಲಿ ಹಾಗೂ ಮತಗಟ್ಟೆಗಳ ವ್ಯಾಪ್ತಿಯಲ್ಲಿ, ಸಂಬಂಧಿಸಿದ ಮತಗಟ್ಟೆ ಅಧಿಕಾರಿಗಳು ಹಾಜರಿದ್ದು Mapping ಮತ್ತು Progeny ಕಾರ್ಯ ಕೈಗೊಳ್ಳುವರು.

ಸಾರ್ವಜನಿಕರು ತಮಗೆ ಸಂಬಂಧಿಸಿದ ಮತಗಟ್ಟೆಗಳಿಗೆ ಭೇಟಿ ನೀಡಿ, ತಮ್ಮ ಮತ್ತು ಕುಟುಂಬದವರ ಹೆಸರುಗಳು ಒಚಿಠಿಡಿಟಿರ ಮತು ಕಡಿಂರಜಟಿಥಿ ಆದ ಬಗ್ಗೆ ಖಚಿತ ಪಡಿಸಿಕೊಳ್ಳಲು ಮತ್ತು Mapping ಮತ್ತು Progeny ಆಗದೇ ಇದ್ದಲ್ಲಿ ಭೇಟಿ ಸಮಯದಲ್ಲಿ ಮಾಡಿಸಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ನವಲಗುಂದ:** ಕೃಷಿಯನ್ನು ರೈತ ಲಾಭದಾಯಕ ಗೊಳಿಸಲು ಕೃಷಿಯ ಜೊತೆಗೆ ಉಪ ಕಸಬಾಗಿ ಕುರಿ, ಕೋಳಿ, ಹೈನುಗಾರಿಕೆ ಹಾಗೂ ಮೀನು ಸಾಕಾಣಿಕೆ ಮಾಡುವದರಿಂದ ಹೆಚ್ಚಿನ ಲಾಭ ಗಳಿಸಬಹುದು ಎಂದು ಮೊರಬ ಕೃಷಿ ಸಮೃದ್ಧಿ ರೈತ ಉತ್ಪಾದಕರ ಕಂಪನಿ ಹಾಗೂ ದಾನೇಶ್ವರಿ ಫಾರ್ಮ್ ಹೌಸ್ ನ ಮಾಲಿಕ ಮಂಜುನಾಥ್ ಕಾಲವಾಡ ಹೇಳಿದರು.

ಅವರು ಮಂಗಳವಾರ ಮೊರಬ ಗ್ರಾಮದಲ್ಲಿ ಕೃಷಿ ಸಮೃದ್ಧಿ ರೈತ ಉತ್ಪಾದಕರ ಕಂಪನಿ ಲಿಮಿಟೆಡ್, ದಾನೇಶ್ವರಿ ಫಾರ್ಮ್ ಹೌಸ್ ಮೊರಬ ಹಾಗೂ ರೂಡ್ಸೆಟ್ ತರಬೇತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು

ನಂತರ ದೇಶದ ವಿವಿಧ ರಾಜ್ಯಗಳಿಂದ ಆಗಮಿಸಿದ ಕೆನರಾ ಬ್ಯಾಂಕ್ ನ 68 ಜನ ಸಹಾಯಕ ಪ್ರಭಂದಕರು, ಪ್ರಶಿಕ್ಷಣಾರ್ಥಿಗಳೊಂದಿಗೆ ಫಾರ್ಮಗಳಿಗೆ ತರಳಿ ಎಫ್ ಪಿ ಒ ರಚನೆ, ಅವುಗಳ ಕಾರ್ಯನಿರ್ವಹನೆ, ಮತ್ತು ಕುರಿ ಮತ್ತು ಆಡು ಸಾಕಣೆ ಮಾಹಿತಿ ನೀಡಿರು.

ಕಂಪನಿ ಸಿಇಓ ಯೋಗಪ್ಪ ಧಾರವಾಡ, ಕಾನೂನು ಸಲಹೆಗಾರ ಚಿದಾನಂದ ಪಿ ಮನ್ಸೂರ್, ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ನಿರ್ದೇಶಕರ ಬಸವರಾಜ ಕುಂದಗೋಳಮಠ, ರುಡ್ ಸೆಟ್ ಸಂಸ್ಥೆಯ ಡೈರೆಕ್ಟರ್ ಪ್ರುಥ್ವಿರಾಜ್ ಜಿ. ಪಿ ಕೆನರಾ ಬ್ಯಾಂಕ್, ಪುಣೆ ವೃತ್ತದ ಹಿರಿಯ ಪ್ರಬಂಧಕರಾದ ಮಂಜೀತ್ ಸಿಂಗ್ ಯಾದವ್, ರುಡ್ ಸೆಟ್ ಸಂಸ್ಥೆಯ ಹಿರಿಯ ಉಪನ್ಯಾಸಕ ಜಗದೀಶ ಪೂಜಾರ. ಡೈರೆಕ್ಟರ್ ರೂಡ್ಸೆಟ್, ಹಾಗೂ ಕಂಪನಿ ನಿರ್ದೇಶಕರು ಗ್ರಾಮಸ್ಥರು ಉಪಸ್ಥಿತರಿದ್ದರು.

# ಪಿಯುಸಿ ವಿದ್ಯಾರ್ಥಿಗಳ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 2026–27ನೇ ಸಾಲಿನ ಪ್ರವೇಶ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸಬಹುದು. ಅಥಣಿ ಭಾಗ 1 ಮತ್ತು ಭಾಗ 2ರ ಬಾಲಕಿಯರ ವಸತಿನಿಲಯ ಹಾಗೂ ಕೊಕಟನೂರಿನ ಬಾಲಕರ ನಿಲಯಕ್ಕೆ ಪ್ರವೇಶ ಕಲ್ಪಿಸಲಾಗುವುದು.

ಆದಾಯ ಮಿತಿ: ಪ್ರವರ್ಗ–1, ಎಸ್.ಸಿ, ಎಸ್.ಟಿ: ಪೋಷಕರ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು.

ಪ್ರವರ್ಗ– 2ಎ, 2ಬಿ, 3ಎ, 3ಬಿ: ಪೋಷಕರ ವಾರ್ಷಿಕ ಆದಾಯ ರೂ. 1.00 ಲಕ್ಷ ಮೀರಿರಬಾರದು.

**ಅರ್ಜಿ ಸಲ್ಲಿಕೆ ಪ್ರಾರಂಭ:** ಮೇ 25 ಕೊನೆಯ ದಿನಾಂಕ ಜೂನ್ 15

ಹೊಸ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಥಣಿ ಕಚೇರಿಯನ್ನು ಸಂಪರ್ಕಿಸಲು ವೆಂಕಟೇಶ ಕುಲಕರ್ಣಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐನಾಪೂರದಲ್ಲಿ 20 ಲಕ್ಷ ರೂ ವೆಚ್ಚದ ಸಮುದಾಯ ಭವನಕ್ಕೆ ಚಾಲನೆ

**ಬೆಳಗಾವಿ ವಾರ್ತೆ ಮೋಳೆ:** ಬಹುದಿನಗಳಿಂದ ಬೇಡಿಕೆ ಯಾಗಿ ಉಳಿದಿರುವ ಕಾಗವಾಡ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಐನಾಪೂರ ಪಟ್ಟಣದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಹತ್ತಿರ ಸಮುದಾಯ ಭವನ ನಿರ್ಮಿಸಬೇಕೆಂದು ಹಾಲುಮತ ಸಮಾಜ ಬಾಂಧವರ ಬೇಡಿಕೆಯಾಗಿತ್ತು. ಅದನ್ನು ಮನಗಂಡ ಶಾಸಕ ರಾಜು ಕಾಗೆಯವರು ಸಮುದಾಯ ಭವನ ಮಂಜೂರು ಮಾಡಿದ್ದಾರೆ ಎಂದು ಪಟ್ಟಣ ಪಂಚಾಯತ್ ಸದಸ್ಯ ಪ್ರವೀಣ ಗಾಣಿಗೇರ ಹೇಳಿದರು.

ಅವರು ಸೋಮವಾರ ಐನಾಪೂರ ಪಟ್ಟಣದ ಹೊರವಲಯದಲ್ಲಿರುವ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಹತ್ತಿರ ಸನ್ 2023–24 ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಹಿಂದೂಳಿದ ವರ್ಗಗಳ ಕಲ್ಯಾಣ ನಿಧಿಯಡಿ 20 ಲಕ್ಷ ರೂ ಅನುದಾನ ಮಂಜೂರುಗೊಳಿಸಿ ಇಂದು ಸಮುದಾಯ ಭವನಕ್ಕೆ ಚಾಲನೆ ನೀಡಲಾಗಿದೆ ಎಂದು ಪ್ರವೀಣ ಗಾಣಿಗೇರ ಹೇಳಿದರು. ಬೀರಲಿಂಗೇಶ್ವರ ದೇವರು ಐನಾಪೂರ ಸೇರಿದಂತೆ ಈ ಭಾಗದ ಹಾಲುಮತ ಸಮಾಜದ ಬಾಂಧವರ ಜಾಗೃತ ದೇವರಾಗಿದ್ದು, ಪ್ರತಿವರ್ಷ ಧಾರ್ಮಿಕ ಕಾರ್ಯಕ್ರಮಗಳು, ಜಾತ್ರೆ ಸೇರಿದಂತೆ ಹಲವಾರು ಧಾರ್ಮಿಕ ಕಾರ್ಯಕ್ರಮಗಳು ಜರುಗುತ್ತವೆ. ಆ ಸಮಾಜದವರಿಗೊಂದು ಸಮುದಾಯ ಭವನ ಅವಶ್ಯಕತೆ ಇತ್ತು. ಅದನ್ನು ಮನಗಂಡು ಶಾಸಕ ರಾಜು ಕಾಗೆಯವರು ಮಂಜೂರು ಗೊಳಿಸಿದ್ದಾರೆ ಎಂದರು. ಪಟ್ಟಣ ಪಂಚಾಯತ್ ಸದಸ್ಯ ಅರುಣ ಗಾಣಿಗೇರ ಸನ್ಮಾನ ಸ್ವೀಕರಿಸಿ ಮಾತನಾಡುತ್ತ ಶಾಸಕ ರಾಜು ಕಾಗೆಯವರು ಐನಾ ಪೂರ ಪಟ್ಟಣಕ್ಕೆ ನೂರಾರು ಕೋಟಿ ಅನುದಾನ ತಂದು ವಿವಿಧ ಅಭಿವೃದ್ಧಿ ಕಾರ್ಯ ಗಳನ್ನು ಮಾಡಿದ್ದಾರೆ. ಹಾಲುಮತ ಸಮಾಜ ದ ಜನರಿಗೆ ಸಮುದಾಯ ಭವನ ಅವಶ್ಯಕ ತೆಯನ್ನು ಮನಗಂಡು ಮಂಜೂರುಗೊಳಿ ಸಿದ್ದಾರೆ. ಸಮಾಜದ ವತಿಯಿಂದ ಹಾಗೂ ಐನಾ ಪೂರ ಪಟ್ಟಣ ದ ವತಿಯಿಂದ ಶಾಸಕ ರಾಜು ಕಾಗೆಯವರನ್ನು ಅಭಿನಂಧಿಸು ವುದಾಗಿ ಹೇಳಿ, ಸಮುದಾಯ ಭವನದ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.



ಈ ವೇಳೆ ಪಟ್ಟಣ ಪಂಚಾಯತ್ ಸದಸ್ಯರಾದ ಪ್ರವೀಣ ಗಾಣಿಗೇರ, ಅರುಣ ಗಾಣಿಗೇರ, ಕುಮಾರ ಜಮುಕರ, ಮುಖಂಡರಾದ ರಾಯಪ್ಪ ಹಾಲಾರೊಟ್ಟಿ, ಸುರೇಶ ಅಡಿಸೇರಿಅರವಿಂದ ಕಾರ್ಚಿ, ಅನೀಲ ಸತ್ತಿ, ಇಸಾಕ ರಾವತ್, ವಿಜಯ ಹರಳೆ, ನವಲಪ್ಪ ಹಾಲಾರೊಟ್ಟಿ, ಪ್ರಕಾಶ ಗಾಣಿಗೇರ, ದಾದಾ ಜಂತೆನ್ನವರ, ಪ್ರಕಾಶ ಚಿನಗಿ ಸೇರಿದಂತೆ ಅನೇಕರು ಇದ್ದರು.

# ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಆನ್‌ಲೈನ್ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ 2026–27ನೇ ಸಾಲಿನ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ 5ನೇ ತರಗತಿಯಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸಬಹುದಾಗಿದೆ.

ಅಥಣಿ, ಕೋಕಟನೂರ, ಅಡಹಳ್ಳಿ, ಐಗಳಿ, ತೆಲಸಂಗ, ಬಾಡಗಿ, ಶಿವನೂರ, ಅನಂತಪುರ, ಮದಭಾವಿ, ಖಿಳೇಗಾಂವ, ಮೊಳೆ, ಕಾಗವಾಡ, ಶಿರಗುಪ್ಪಿ ಹಾಗೂ ಬಾಲಕಿಯರ ವಸತಿನಿಲಯ ಅಥಣಿ, ಅಡಹಳ್ಳಿ ಇಲ್ಲಿನ ಹಾಸ್ಟೆಲ್‌ಗಳಿಗೆ ಪ್ರವೇಶ ಕಲ್ಪಿಸಲಾಗುವುದು.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ–1, ಎಸ್.ಸಿ, ಎಸ್.ಟಿ ಅವರಿಗೆ ರೂ.2.50 ಲಕ್ಷ ಮತ್ತು ಪ್ರವರ್ಗ– 2ಎ, 2ಬಿ, 3ಎ, 3ಬಿ ಗಳಿಗೆ ರೂ.1.00 ಲಕ್ಷ ನಿಗದಿಪಡಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 8

ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಥಣಿ ಕಚೇರಿಯನ್ನು ಸಂಪರ್ಕಿಸಲು ವೆಂಕಟೇಶ ಕುಲಕರ್ಣಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಹುಬ್ಬಳ್ಳಿಯಲ್ಲಿ 'ರುದ್ರಾಭಿಷೇಕಂ' ಚಿತ್ರದ ಹಾಡುಗಳ ಬಿಡುಗಡೆ

**ಬೆಳಗಾವಿ ವಾರ್ತೆ ಹುಬ್ಬಳ್ಳಿ :** 'ಪ್ಯಾನ್ ಇಂಡಿಯಾ ಕ್ರಿಯೇಷನ್ಸ್' ಬೆಂಗಳೂರ ಅವರ 'ರುದ್ರಾಭಿಷೇಕಂ' ಚಲನಚಿತ್ರದ 'ಇಂದಲ್ಲ ನಾಳೆ' ಮತ್ತುವ 'ಹೃದಯದ ಬಾಗಿಲ ತೆರೆದರೆ' ಎರಡು ಹಾಡುಗಳ ಬಿಡುಗಡೆ ಸಮಾರಂಭ ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ' ಸ್ವಾಮಿಗಳ ಮಠದ ಆವರಣದಲ್ಲಿ ನೆರವೇರಿತು.

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ದೀಪ ಬೆಳಗಿಸಿ ಉದ್ಘಾಟಿಸಿ 'ಇಂದಲ್ಲ ನಾಳೆ' ಹಾಡಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕನ್ನಡ ಚಿತ್ರರಂಗ ಇಂದು ದೊಡ್ಡ ಮಟ್ಟಕ್ಕೆ ಬೆಳೆದಿದ್ದು, ಹಿಂದಿ ಹಾಗೂ ಇಂಗ್ಲಿಷ್ ಚಿತ್ರಗಳಿಗೆ ಸ್ಪರ್ಧೆ ನೀಡುವ ಮಟ್ಟದ ಸಿನಿಮಾಗಳು ನಿರ್ಮಾಣವಾಗುತ್ತಿವೆ. ಪ್ರೇಕ್ಷಕರು ಕನ್ನಡ ಚಿತ್ರಗಳನ್ನು ಚಿತ್ರಮಂದಿರಗಳಲ್ಲೇ ನೋಡಿ ಎಂದರು.

ನಟ ವಿಜಯ ರಾಘವೇಂದ್ರ ಮಾತನಾಡಿ ಸಿದ್ಧಾರೂಢ ಮಠ ನಮ್ಮ ಕುಟುಂಬಕ್ಕೆ ಹೊಸದೇನಲ್ಲ. ಇದು ರಾಜ್‌ಕುಮಾರ್ ಮಾಮನ ಹೃದಯಕ್ಕೆ ತುಂಬ ಹತ್ತಿರವಾದ ಸ್ಥಳ, ಶಿವಣ್ಣ, ಅಪ್ಪು ಮಾಮ ಎಲ್ಲರಿಗೂ ಅತ್ಯಂತ ಪ್ರಿಯವಾದ ಜಾಗ" ಎಂದ ಅವರು ಚಿತ್ರದಲ್ಲಿ ಮೊದಲ ಬಾರಿಗೆ ವೀರಗಾಸೆ ಕಲಾವಿದನ ಪಾತ್ರ ನಿರ್ವಹಿಸಿದ್ದು, ತಂದೆ–ಮಗನ ಪಾತ್ರದಲ್ಲಿ ಅಭಿನಯಿಸಿರುವೆ ಎಂದರು. ನಿರ್ದೇಶಕ ವಸಂತ್‌ಕುಮಾರ್ ಮಾತನಾಡಿ, ದೈವಪರ ಹಿನ್ನೆಲೆಯ ಜನಪದ ಕಲೆಯನ್ನು ಮನೆಮನೆಗೂ ತಲುಪಿಸುವ ಉದ್ದೇಶದಿಂದ ಚಿತ್ರ ನಿರ್ಮಿಸಲಾಗಿದೆ. ದೇವನಹಳ್ಳಿ, ಗೋಕರ್ಣ, ಹೊನ್ನಾವರ, ಕುಮಟಾ, ಅಬ್ಬಕ್ಕ ಫೋರ್ಟ್ ಹಾಗೂ ಅಘನಾಶಿನಿ ಹಿನ್ನೀರು ಪ್ರದೇಶಗಳಲ್ಲಿ 50ಕ್ಕೂ ಹೆಚ್ಚು ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದ್ದು ಚಿತ್ರವು ಜೂನ 16ರಂದು ತೆರೆಗೆ ಬರಲಿದೆ ಎಂದರು. ಚಿತ್ರದ ಸಂಗೀತ ನಿರ್ದೇಶಕ ವಿ. ಮನೋಹರ್, ನಿರ್ಮಾಪಕ ಚಿದಾನಂದಮೂರ್ತಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಾಳು ಮುಗಜಿಕೊಂಡಿ, ವಿನಾಯಕ ಘೋಡಕೆ, ಪತ್ರಕರ್ತ ಗಣಪತಿ ಗಂಗೊಳ್ಳಿ, ಸಂಭಾಜಿ ಕಲಾಲ್ ಭರಮರೆಡ್ಡಿ ಪೂಜಾರ್, ವಿನಯ್ ಪಾಟೀಲ, ಹಳೆಹುಬ್ಬಳ್ಳಿ ಪೋಲೀಸ್ ಇನ್ಸ್‌ಪೆಕ್ಟರ್ ಎಂ.ಎನ್.ಸಿಂಧೂರ, ನಾಯಕಿ ಪ್ರಿಯಾಂಕ ತಿಮ್ಮೇಶ, ಮಮತಾಮನು, ಮನು, ಮುತ್ತುರಾಜ್ ಟಿ ಸೇರಿದಂತೆ ಚಿತ್ರತಂಡದ ಕಲಾವಿದರು, ತಂತ್ರಜ್ಞರು ಪಾಲ್ಗೊಂಡಿದ್ದರು. ಖ್ಯಾತ ಗಾಯಕ ವಿಷ್ಣು, ಹುಬ್ಬಳ್ಳಿಯ ಗಾಯಕ ರವೀಂದ್ರ ರಾಮದುರ್ಗಕರ ಹಾಡುಗಳ ಮೂಲಕ ರಂಜಿಸಿದರು. ಇದೆ ಸಂದರ್ಭದಲ್ಲಿ ವಿಜಯ ರಾಘವೇಂದ್ರರಿಗೆ ಚಿತ್ರ ತಂಡದಿಂದ 'ನ್ಯಾಚರಲ್ ಸ್ಟಾರ್' ಬಿರುದು ನೀಡಿ ಗೌರವಿಸಲಾಯಿತು.



ಚಿತ್ರದಲ್ಲಿ ನಾಯಕರಾಗಿ ವಿಜಯ ರಾಘವೇಂದ್ರ, ನಾಯಕಿಯಾಗಿ ಪ್ರಿಯಾಂಕ ತಿಮ್ಮೇಶ, ಬಲರಾಜ್ ವಾಡಿ, ಶಂಕರ ನಾರಾಯಣ್, ಮೈಸೂರು ಬಸವರಾಜ್, ಬ್ಯಾಂಕ್‌ಪ್ರಸಾದ, ಮನು, ಬುಲೆಟ್ ವಿನು, ವಿನಯ್, ಸನತ್, ಸಂದೀಪ್, ಮಹಾಲಿಂಗ್ ಹೂಗಾರ್, ಸೌಂದರ್ಯ, ನವನೀತ, ಮಮತಾ ಮನು, ಮಂಜುಳಾ, ಧನಲಕ್ಷ್ಮಿ, ಸ್ವಾತಿ ಮೊದಲಾದವರಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಮುತ್ತುರಾಜ್, ವಿ.ಮನೋಹರ್ ಸಂಗೀತ , ಭಜರಂಗಿ ಮೋಹನ್ ನೃತ್ಯ ಸಂಯೋಜನೆ, ಥ್ರಿಲ್ಲರ್‌ಮಂಜು ಸಾಹಸ, ಬಾಬುಖಾನ್ ಕಲಾ ನಿರ್ದೇಶನ, ನೊಣವಿನಕೆರೆ ಕುಮಾರ ಪ್ರಸಾಧನ, ಮುತ್ತುರಾಜ್.ಟಿ ಸಂಕಲನ, ನಾಗೇಂದ್ರ, ಡಾ. ಪ್ರಭು.ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಪಿ.ಆರ್.ಓ, ಸಹ ನಿರ್ದೇಶನ ಮನು ಮತ್ತು ಧೀರಜ್ ಅವರದಿದ್ದು, ಕೆ ವಸಂತ್‌ಕುಮಾರ್ ಕಥೆ–ಚಿತ್ರಕಥೆ ಬರೆದು ನಿರ್ದೇಶನ ಜೊತೆಗೆ ಚಿತ್ರಕ್ಕೆ ಹಾಡುಗಳನ್ನು ಬರೆದು ತತ್ವಜ್ಞಾನಿಯಾಗಿ ಅಭಿನಯಿಸಿದ್ದಾರೆ. ಕೆ.ಎನ್. ಮಂಜುನಾಥ, ಎನ್. ಜಯರಾಮಪ್ಪ, ಕೆ. ವೆಂಕಟೇಶ್, ಬಿ. ಚಿದಾನಂದಮೂರ್ತಿ, ಸುರೇಶ್‌ಬಾಬು, ಅಶ್ವಥ್‌ನಾರಾಯಣ, ಶಿವಕುಮಾರ್. ಕೆ.ಎಸ್. ರವಿಕುಮಾರ್ ಹಾಗೂ ಕುಸುಮ ವಸಂತ್‌ಕುಮಾರ ಚಿತ್ರ ನಿರ್ಮಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001